# ಸಂಚಾರ ದಂಡ ಪಾವತಿಗೆ ರಿಯಾಯಿತಿ ಆಫರ್: ರಾಜ್ಯದಲ್ಲಿ ಬಾಕಿ ಇರುವ ಪ್ರಕರಣಗಳು

• ಉದಯವಾಹಿನಿ, ಕೆ.ಆರ್.ಪುರ

ಬಾಕಿ ಉಳಿದಿರುವ ಸಂಚಾರ ದಂಡ (ಇ-ಚಲನ್) ಪಾವತಿಗೆ ಸರ್ಕಾರ ಘೋಷಿಸಿರುವ ಶೇ.50ರಷ್ಟು ರಿಯಾಯಿತಿ ಅವಕಾಶ ನಾಳೆ (ಜೂನ್ 21) ರಿಂದ ಆರಂಭವಾಗಲಿದೆ. ಜುಲೈ 10ರವರೆಗೆ ಈ ಅವಕಾಶ ಚಾಲ್ತಿಯಲ್ಲಿರಲಿದ್ದು, 2026ರ ಮೇ ತಿಂಗಳಿಗೂ ಮೊದಲು ಪೊಲೀಸ್ ಇಲಾಖೆಯ ಸಂಚಾರ ಇ-ಚಲನ್‌ಗಳಲ್ಲಿ ದಾಖಲಾಗಿ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತ ಮತ್ತು ಸಾರಿಗೆ ಇಲಾಖೆಯಲ್ಲಿ 1991ರಿಂದ 2022ರ ಅವಧಿಯಲ್ಲಿ ದಾಖಲಾಗಿರುವ ದಂಡವನ್ನು ಪಾವತಿಸಬಹುದು ಎಂದು ರಾಜ್ಯ ಸರ್ಕಾರ ತನ್ನ ಆದೇಶದಲ್ಲಿ ತಿಳಿಸಿದೆ.

ದಂಡ ಸಂಗ್ರಹಣೆಯನ್ನು ಯಶಸ್ವಿಗೊಳಿಸಲು ಬೆಂಗಳೂರು ಸಂಚಾರ ಪೊಲೀಸರು


ಉದಯವಾಹಿನಿ ಚಿತ್ರ

ನಗರದ 12 ಸ್ಥಳಗಳಲ್ಲಿ ವಿಶೇಷ ಕೌಂಟರ್‌ಗಳನ್ನ ಆರಂಭಿಸಿದ್ದಾರೆ. ವಾಹನ ಸವಾರರು ಈ ಕೌಂಟರ್‌ಗಳಲ್ಲಿ ದಂಡ ಪಾವತಿಸಬಹುದಾಗಿದೆ. ಸದ್ಯ ರಾಜ್ಯದಲ್ಲಿ ಒಟ್ಟು 5.05 ಕೋಟಿ ಸಂಚಾರ ನಿಯಮ ಉಲಂಘನೆ ಪ್ರಕರಣಗಳು ಬಾಕಿಯಿದ್ದು, 2,727 ಕೋಟಿ ರೂ ದಂಡ ಪಾವತಿಯಾಗಬೇಕಿದೆ. ಆ ಪೈಕಿ ಬೆಂಗಳೂರಿನಲ್ಲಿಯೇ 3.37 ಕೋಟಿ ಸಂಚಾರ ನಿಯಮ ಉಲಂಘನೆ ಪ್ರಕರಣಗಳು ಬಾಕಿಯಿದ್ದು, 1,843 ಕೋಟಿ ರೂ ದಂಡ ವಸೂಲಿಯಾಗಬೇಕಿದೆ. 2023ರಲ್ಲಿ 3 ಬಾರಿ 2025ರಲ್ಲಿ 2 ಬಾರಿ ಸಂಚಾರ ದಂಡ ಪಾವತಿಗೆ ರಿಯಾಯಿತಿ ಅವಕಾಶ ನೀಡಲಾಗಿತ್ತು. ಸದ್ಯ ದಂಡ ಪಾವತಿಗೆ ರಿಯಾಯತಿ ಅವಕಾಶವನ್ನ 6ನೇ ಬಾರಿಗೆ ನೀಡಲಾಗಿದೆ. ಬೆಂಗಳೂರೊಂದರಲ್ಲೇ 2026ರ ಮೇ ತಿಂಗಳವರೆಗೆ 48,48,831 ಪ್ರಕರಣಗಳು ದಾಖಲಾಗಿವೆ. ಬೆಂಗಳೂರು ಸಂಚಾರ ಪೊಲೀಸ್ ಇಲಾಖೆಯ ಅಂಕಿ ಅಂಶಗಳ ಪ್ರಕಾರ, ನಗರದಲ್ಲಿ ಈ ವರ್ಷ ವಿವಿಧ ಸಂಚಾರ ನಿಯಮ ಉಲ್ಲಂಘನೆ ಆರೋಪದಡಿ ಮೋಟಾರು ವಾಹನ ಕಾಯ್ದೆ ಅನ್ವಯ ಪೊಲೀಸರು 48,48,831 ಪ್ರಕರಣಗಳನ್ನ ದಾಖಲಿಸಿಕೊಂಡಿದ್ದಾರೆ. ಅವುಗಳ ಪೈಕಿ ದ್ವಿಚಕ್ರ ವಾಹನ ಚಲಾಯಿಸುವಾಗ ಹೆಲ್ಮೆಟ್ ಧರಿಸದ ಅಪರಾಧದ ಪ್ರಕರಣಗಳೇ ಹೆಚ್ಚು ದಾಖಲಾಗಿವೆ. ವಾಹನ ಸವಾರ ಹೆಲ್ಮೆಟ್ ಧರಿಸದ ಹಿನ್ನೆಲೆಯಲ್ಲಿ ಪ್ರಸ್ತುತ ವರ್ಷ (ಮೇ ಅಂತ್ಯದವರೆಗೆ) 13,60,893 ಪ್ರಕರಣಗಳು ದಾಖಲಾಗಿವೆ. ಹಿಂಬದಿ ಸವಾರ ಹೆಲ್ಮೆಟ್ ಧರಿಸದ ಆರೋಪದಡಿ 6,54,035 ಪ್ರಕರಣಗಳು ದಾಖಲಾಗಿವೆ. ಇನ್ನುಳಿದಂತೆ ಟ್ರಾಫಿಕ್ ಸಿಗ್ನಲ್ ಜಂಪ್ ಆರೋಪದಡಿ 6,66,562 ಹಾಗೂ ಸೀಟ್ ಬೆಲ್ಟ್ ಧರಿಸದೇ ವಾಹನ ಚಲಾಯಿಸಿದ ಆರೋಪದಡಿ 5,11,517 ಪ್ರಕರಣಗಳು ದಾಖಲಾಗಿವೆ. ರಿಯಾಯಿತಿ ಅವಕಾಶ ಇರುವ ಸಂದರ್ಭದಲ್ಲಿ ನಗರದಲ್ಲಿ ವಾಹನಗಳ ತಪಾಸಣೆಯನ್ನ ಮತ್ತಷ್ಟು ತೀವ್ರಗೊಳಿಸಲಾಗುವುದು.

## ಮೇಕೆದಾಟು ಯೋಜನೆಗೆ ಡಿಕೆಶಿ ಹೋರಾಟ ಮಾಡಲಿ: ಶೋಭಾ

• ಉದಯವಾಹಿನಿ,ಬೆಂಗಳೂರು

ಮೇಕೆದಾಟು ಯೋಜನೆಗಾಗಿ ಕೇವಲ ವಿರೋಧ ಪಕ್ಷದಲ್ಲಿದ್ದಾಗ ಹೋರಾಟ ಮಾಡಿದರೆ ಸಾಲದು ತಮ್ಮ ಕೈಗೆ ಅಧಿಕಾರ ಬಂದಾಗ ಹೋರಾಟ ಮಾಡಿ ತೋರಿಸಬೇಕು ಎಂದು ಕೇಂದ್ರ ಸಚಿವ ಶೋಭಾ ಕರಂದ್ಲಾಜೆ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಇವತ್ತು ಡಿಕೆ ಶಿವಕುಮಾರ್ ಅವರ ಕೈಗೆ ಅಧಿಕಾರ ಬಂದಿದೆ ಮೇಕೆದಾಟು ಯೋಜನೆಯನ್ನು ಮಾಡಿ ತೋರಿಸಬೇಕು. ಯಾಕೆಂದರೆ ಇವತ್ತು ತಮಿಳುನಾಡಿನಲ್ಲೂ ಕಾಂಗ್ರೆಸ್ ಬೆಂಬಲಿತ ಸರ್ಕಾರವಿದೆ ಎಂದರು.

ಎರಡು ಸರ್ಕಾರಗಳು ಕೂಡ ತಕ್ಷಣ ಮೇಕೆದಾಟು ಯೋಜನೆಯನ್ನು ಮಾಡಬೇಕು. ಅದಕ್ಕಾಗಿ ನಾನು ಡಿ.ಕೆ. ಶಿವಕುಮಾರ್ ಅವರಿಗೆ ಆಗ್ರಹ ಮಾಡ್ತೇನೆ. ರಾಜಕೀಯ ಬಿಟ್ಟು, ಎಲ್ಲಾ ಮೇಲಾಟಗಳನ್ನು ಬಿಟ್ಟು ಅಭಿವೃದ್ಧಿಯ ಕಡೆ ಗಮನ ಕೊಡಿ ಎಂದು ಅವರು ಒತ್ತಾಯಿಸಿದರು. ಮೇಕೆದಾಟು ಯೋಜನೆಯನ್ನು ಪೂರ್ಣ ಮಾಡುವ ಕಡೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಗಮನ ಕೊಡಬೇಕು ಎಂದು ಹೇಳಿದರು.

## ನಮ್ಮ ಮೆಟ್ರೋ ಗಡುವು ಮತ್ತೆ ವಿಸ್ತರಣೆ: ಆಗಸ್‌ಗೆ ಪೂರ್ಣ ಸೇವೆಗೆ 2027ರ ಮಾರ್ಚ್ ಗುರಿ..!

• ಉದಯವಾಹಿನಿ, ಬೆಂಗಳೂರು

ನಗರದ ಜನರು ಬಹಳ ನಿರೀಕ್ಷೆಯಿಂದ ಕಾಯುತ್ತಿರುವ ನಮ್ಮ ಮೆಟ್ರೋ ಪಿಂಕ್ ಮತ್ತು ಬ್ಲೂ ಲೈನ್ ಯೋಜನೆಗಳ ಗಡುವು ಮತ್ತೊಮ್ಮೆ ಮುಂದೂಡಲ್ಪಟ್ಟಿದೆ. ಪಿಂಕ್ ಲೈನ್‌ನ ಎಲಿವೇಟೆಡ್ ಮಾರ್ಗವನ್ನು ಆಗಸ್ಟ್ 15ರೊಳಗೆ ಸಾರ್ವಜನಿಕ ಸೇವೆಗೆ ಆರಂಭಿಸುವ ಗುರಿ ಹೊಂದಲಾಗಿದ್ದು, ನಾಗವಾರವರೆಗಿನ ಭೂಗತ ಮಾರ್ಗ ಸೇರಿ ಸಂಪೂರ್ಣ ಪಿಂಕ್ ಲೈನ್ ಕಾಮಗಾರಿ 2027ರ ಮಾರ್ಚ್ ವೇಳೆಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ.

ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಬಿಎಂಆರ್‌ಸಿಎಲ್ ಅಧಿಕಾರಿಗಳೊಂದಿಗೆ ಪರಿಶೀಲನಾ ಸಭೆ ನಡೆಸಿದ ಬಳಿಕ ಈ ಮಾಹಿತಿ ನೀಡಿದರು. ಕಾಳೇನ ಅಗ್ರಹಾರದಿಂದ ತಾವರೆಕೆರೆವರೆಗಿನ ಮೇಲ್ದರ್ಜೆ ಮಾರ್ಗ ಆಗಸ್ಟ್‌ನಲ್ಲಿ ಕಾರ್ಯಾರಂಭ ಮಾಡುವ ಸಾಧ್ಯತೆ ಇದೆ ಎಂದು ಹೇಳಿದರು. ಬ್ಲೂಲೈನ್ ಯೋಜನೆಯಲ್ಲೂ ಹೊಸ ಗಡುವು ನಿಗದಿಯಾಗಿದೆ. ಕೆ.ಆರ್.ಪುರಂಮಾರತಹಳ್ಳಿಎಚ್‌ಎಸ್‌ಆರ್ ಲೇಔಟ್ ಮಾರ್ಗದಲ್ಲಿ 2026ರ ಅಕ್ಟೋಬರ್ ವೇಳೆಗೆ ಪ್ರಯೋಗಾತ್ಮಕ ಸಂಚಾರ ನಡೆಸುವ ಗುರಿ ಹೊಂದಲಾಗಿದೆ. ಹೆಬ್ಬಾಳ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಮಾರ್ಗ 2027ರ ಜೂನ್ ವೇಳೆಗೆ ಕಾರ್ಯಾಚರಣೆಗೆ ಬರಲಿದ್ದು, ಕೆ.ಆರ್.ಪುರಂ ಹೆಬ್ಬಾಳ ಮಾರ್ಗ 2027ರ ಡಿಸೆಂಬರ್ ವೇಳೆಗೆ ಪೂರ್ಣಗೊಳ್ಳುವ ನಿರೀಕ್ಷೆಯಿದೆ ಎಂದು ತಿಳಿಸಿದರು. ಇದೇ ವೇಳೆ ಮೆಟ್ರೋ ಯೋಜನೆಗಳು ಪದೇ ಪದೇ ಗಡುವು ತಪ್ಪುತ್ತಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, ಒಂದು ಅಥವಾ ಎರಡು ವರ್ಷಗಳ ವಿಳಂಬಕ್ಕೆ ಯಾವುದೇ ಸಮರ್ಥನೆ ಇಲ್ಲ. ಈ ಸಂಸ್ಕೃತಿ ಬದಲಾಗಬೇಕು. ಪರಿಹಾರ ಕಂಡುಹಿಡಿಯುವತ್ತ ಅಧಿಕಾರಿಗಳು ಗಮನ ಹರಿಸಬೇಕು. ಬೆಂಗಳೂರಿನ ಜನರ ನಿರೀಕ್ಷೆಗಳಿಗೆ ತಕ್ಕಂತೆ ಯೋಜನೆಗಳ ವೇಗ ಹೆಚ್ಚಬೇಕು ಎಂದು ಸೂಚಿಸಿದರು. ಹೊಸ ಗಡುವುಗಳ ಪ್ರಕಾರ 2028ರ ವೇಳೆಗೆ ಬೆಂಗಳೂರಿನ ಮೆಟ್ರೋ ಜಾಲವು 175 ಕಿಲೋಮೀಟರ್ ಉದ್ದಕ್ಕೆ ವಿಸ್ತರಿಸುವ ನಿರೀಕ್ಷೆಯಿದೆ. ಇದೇ ವೇಳೆ ಮೆಟ್ರೋ ಫೇಸ್-3ರ ಆರೆಂಜ್ ಲೈನ್ ಡಬಲ್ ಡೆಕ್ಕರ್ ಕಾರಿಡಾರ್ ಯೋಜನೆಗೆ ಕೇಂದ್ರ ಸರ್ಕಾರದ ಅನುಮೋದನೆ ಇನ್ನೂ ಬಾಕಿಯಿದ್ದು, ಮುಂದಿನ ಕೆಲ ವಾರಗಳಲ್ಲಿ ಅನುಮತಿ ಸಿಗುವ ವಿಶ್ವಾಸವಿದೆ ಎಂದು ಸಚಿವರು ಹೇಳಿದರು.

## ಆದೇಶ ನಿರ್ಲಕ್ಷ್ಯಸಿದ ಕರ್ನಾಟಕ, ತಮಿಳುನಾಡು, ಕೇರಳಕ್ಕೆ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ಕಳೆದ 50 ವರ್ಷಗಳಲ್ಲಿ ಕಾವೇರಿ ನದಿ ತೀರ ಪ್ರದೇಶದಲ್ಲಿ 12,850 ಚದರ ಕಿಲೋಮೀಟರ್ ಹಸಿರು ಹೊದಿಕೆ ನಾಶವಾಗಿರುವ ಕುರಿತು ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ತಮ್ಮ ಪ್ರತಿಕ್ರಿಯೆ ಸಲ್ಲಿಸದಿದ್ದರೆ ಸ್ವಯಂಪ್ರೇರಿತ ಆದೇಶ ಹೊರಡಿಸಲಾಗುವುದು ಎಂದು ರಾಷ್ಟ್ರೀಯ ಹಸಿರು ನ್ಯಾಯಮಂಡಳಿ ಕರ್ನಾಟಕ, ತಮಿಳುನಾಡು ಮತ್ತು ಕೇರಳ ರಾಜ್ಯಗಳಿಗೆ ಎಚ್ಚರಿಕೆ ನೀಡಿದೆ.

1965ರಿಂದ 2016ರ ಅವಧಿಯಲ್ಲಿ ಕಾವೇರಿ ನದಿ ತೀರ ಪ್ರದೇಶದಲ್ಲಿನ 12,850 ಚದರ ಕಿಲೋಮೀಟರ್ ಪ್ರದೇಶದ ನೈಸರ್ಗಿಕ ಸಸ್ಯವರ್ಗ ನಾಶವಾಗಿದೆ ಎಂಬ ಮಾಧ್ಯಮ ವರದಿಯನ್ನು ಆಧರಿಸಿ ಎನ್‌ಜಿಟಿ ಈ ಪ್ರಕರಣವನ್ನು ದಾಖಲಿಸಿಕೊಂಡಿತ್ತು.

ಈ ಅವಧಿಯಲ್ಲಿ ಗಂಭೀರ ಪರಿಸರ ಬದಲಾವಣೆಗಳಿಗೆ ಒಳಗಾದ ಪ್ರದೇಶಗಳಲ್ಲಿ ಬ್ರಹ್ಮಗಿರಿ ವನ್ಯಜೀವಿ ಅಭಯಾರಣ್ಯ, ಬಂಡೀಪುರ ರಾಷ್ಟ್ರೀಯ ಉದ್ಯಾನವನ, ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ಹಾಗೂ ಕಾವೇರಿ ವನ್ಯಜೀವಿ ಅಭಯಾರಣ್ಯ ಸೇರಿವೆ.

ಎನ್‌ಜಿಟಿಯ ದಕ್ಷಿಣ ವಲಯ ಪೀಠವು 2024ರ ಮಾರ್ಚ್‌ನಿಂದ ಈ ಪ್ರಕರಣದ ವಿಚಾರಣೆ ನಡೆಸುತ್ತಿದೆ. 2024ರ ಜುಲೈ ತಿಂಗಳಿನಿಂದ ಈವರೆಗೆ ಒಂಬತ್ತು ಬಾರಿ ಪ್ರಕರಣವನ್ನು ವಿಚಾರಣೆಗೆ ತೆಗೆದುಕೊಂಡು ಮುಂದೂಡಲಾಗಿದ್ದು, ಈ ಅವಧಿಯಲ್ಲಿ ಸಂಬಂಧಿತ ಮಾಹಿತಿಯನ್ನು ಸಲ್ಲಿಸುವಂತೆ ರಾಜ್ಯ ಸರ್ಕಾರಗಳಿಗೆ ಹಲವು ಬಾರಿ ನಿರ್ದೇಶನ ನೀಡಲಾಗಿದೆ.

ಕಳೆದ ವಾರ ಮತ್ತೆ ವಿಚಾರಣೆಗೆ ಬಂದಾಗ, ನ್ಯಾಯಮೂರ್ತಿ ಪುಷ್ಪ ಸತ್ಯನಾರಾಯಣ ಮತ್ತು ತಜ್ಞ ಸದಸ್ಯ ಪ್ರಶಾಂತ್ ಗರ್ಗವ ಅವರಿದ್ದ ಪೀಠವು ರಾಜ್ಯಗಳು ಹಿಂದಿನ ಆದೇಶಗಳನ್ನು ಪಾಲಿಸದಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿತು.

## ಕಲಬೆರಕೆ ಹಾಲು ತಡೆಗೆ ಗಡಿಗಳಲ್ಲಿ ಟ್ಯಾಂಕರ್‌ಗಳ ತಪಾಸಣೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಹಾಲಿನ ಕಲಬೆರಕೆ ತಡೆಯಲು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ವಿಶೇಷ ಮೆಗಾ ಕಾರ್ಯಾಚರಣೆ ನಡೆಸಿದೆ. ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಆಯುಕ್ತರ ಆದೇಶದ ಮೇರೆಗೆ ಕರ್ನಾಟಕದ ವಿವಿಧ ಗಡಿ ತಪಾಸಣಾ ಕೇಂದ್ರಗಳಲ್ಲಿ 45 ಆಹಾರ ಸುರಕ್ಷತಾ ಅಧಿಕಾರಿಗಳನ್ನು ನಿಯೋಜಿಸಿ, ತಮಿಳುನಾಡು ಹಾಗೂ ಆಂಧ್ರ ಪ್ರದೇಶದಿಂದ ರಾಜ್ಯಕ್ಕೆ ಪ್ರವೇಶಿಸುವ ಹಾಲಿನ ಟ್ಯಾಂಕರ್‌ಗಳ ತಪಾಸಣೆ ನಡೆಸಲಾಯಿತು.

ಕಾರ್ಯಾಚರಣೆಯ ವೇಳೆ ಟ್ಯಾಂಕರ್‌ಗಳಿಂದ ಹಾಲಿನ ಮಾದರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯ ಪರೀಕ್ಷೆಗೆ ಕಳುಹಿಸಲಾಗಿದೆ.

ವರದಿ ಬಂದ ನಂತರ ಯಾವುದೇ ಕಲಬೆರಕೆ ಅಥವಾ ಗುಣಮಟ್ಟದ ಲೋಪ ಕಂಡುಬಂದರೆ ಸಂಬಂಧಪಟ್ಟವರ ವಿರುದ್ಧ ಆಹಾರ ಸುರಕ್ಷತಾ ಕಾಯ್ದೆಯಡಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ರಾಜ್ಯದಲ್ಲಿ ಗ್ರಾಹಕರಿಗೆ ಸುರಕ್ಷಿತ ಮತ್ತು ಗುಣಮಟ್ಟದ ಹಾಲು ಪೂರೈಕೆಯಾಗುವಂತೆ ನೋಡಿಕೊಳ್ಳುವ ಉದ್ದೇಶದಿಂದ ಈ ವಿಶೇಷ ಕಾರ್ಯಾಚರಣೆ ಕೈಗೊಳ್ಳಲಾಗಿದ್ದು, ಮುಂದಿನ ದಿನಗಳಲ್ಲಿಯೂ ಗಡಿ ಪ್ರದೇಶಗಳಲ್ಲಿ ಇಂತಹ ತಪಾಸಣೆಗಳು ಮುಂದುವರಿಯಲಿವೆ ಎಂದು ಅಧಿಕಾರಿಗಳು ತಿಳಿಸಿದರು.

# ಜನರ ಸಮಸ್ಯೆ ಸ್ಪಂದನೆಗೆ ಪ್ರಜಾಸೇವೆ ಇಲಾಖೆ

## ಯಾದಗಿರಿಯಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ ಸಂಪುಟ ಅನುಮೋದನೆ

• ಉದಯವಾಹಿನಿ, ಬೆಂಗಳೂರು

ಸಾರ್ವಜನಿಕರ ಅಹವಾಲುಗಳ ಪರಿಹಾರಕ್ಕೆ ಪ್ರತ್ಯೇಕ ಸಚಿವಾಲಯ ರಚನೆ ಮಾಡಲಾಗುತ್ತಿದ್ದು, ಅದಕ್ಕೆ ಸಚಿವರನ್ನು ಕೂಡ ನೇಮಕ ಮಾಡಲಾಗುವುದು ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಿಎಂ ಡಿ.ಕೆ. ಶಿವಕುಮಾರ್, ಇದು ಕೇವಲ ಅರ್ಜಿಗಳನ್ನು ಸಾಗಿಸುವ ಪೋಸ್ಟ್ ಮ್ಯಾನ್ ಕೆಲಸವಲ್ಲ. ಜನರಿಗೆ ನ್ಯಾಯ ದೊರಕಿಸುವ ವ್ಯವಸ್ಥೆಯಾಗಿ ಕಾರ್ಯನಿರ್ವಹಿಸಲಿದೆ' ಎಂದು ಹೇಳಿದರು.

ಈ ಪ್ರಸ್ತಾವಿತ ಸಚಿವಾಲಯವು ಅಹವಾಲು ಪರಿಹಾರ ಕಾರ್ಯಗಳನ್ನು ಸಂಯೋಜಿಸಿ, ನಾಗರಿಕರು ಹಾಗೂ ಆಡಳಿತದ ನಡುವೆ ಉತ್ತಮ ಸಂವಹನವನ್ನು ಖಚಿತಪಡಿಸಲಿದೆ.

ವಿಧಾನಸಭೆ ಕ್ಷೇತ್ರಗಳಲ್ಲಿ ಸಚಿವರು ಮತ್ತು ಶಾಸಕರ ಸಮ್ಮುಖದಲ್ಲಿ ಜನಸ್ಪಂದನಾ ಸಭೆಗಳನ್ನು ನಡೆಸಲಾಗುತ್ತದೆ. ಕ್ಷೇತ್ರಗಳಿಗೆ ಭೇಟಿ ನೀಡಿ ಜನರ ಸಮಸ್ಯೆಗಳನ್ನು ಆಲಿಸಿ, ನಂತರ ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ ಪರಿಹಾರ ಒದಗಿಸುವ ವ್ಯವಸ್ಥೆಯಾಗಿ ಕಾರ್ಯನಿರ್ವಹಿಸಲಿದೆ.

ಕಟ್ಟಡ ಮಾಲೀಕರಿಗೆ ಮತ್ತೊಂದು ಅವಕಾಶ ದೊರೆತಂತಾಗಿದೆ. ಆಕ್ಯುಪೆನ್ಸಿ ಸರ್ಟಿಫಿಕೇಟ್ ಮತ್ತು ಕಂಪ್ಲೀಷನ್ ಸರ್ಟಿಫಿಕೇಟ್ (ಸಂಬಂಧ ಸರ್ಕಾರ ಮಹತ್ವದ ಸಡಿಲಿಕೆ ನೀಡಿದೆ. 2026ರ ಮೇ 31ರೊಳಗೆ ಕಟ್ಟಡ ನಿರ್ಮಾಣಕ್ಕಾಗಿ ಅರ್ಜಿ ಸಲ್ಲಿಸಿದವರಿಗೆ ಮಾತ್ರ ಅವಕಾಶ ನೀಡಲಾಗಿತ್ತು. ಆದರೆ ಗುತ್ತಿಗೆದಾರರ ಮನವಿಯ ಮೇರೆಗೆ, ಕಟ್ಟಡ ಪೂರ್ಣಗೊಂಡು ತಾತ್ಕಾಲಿಕ ವಿದ್ಯುತ್ ಸಂಪರ್ಕ ಹೊಂದಿರುವವರಿಗೆ ಇನ್ನೂ 15 ದಿನಗಳ ಕಾಲ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ.

ಆಧಾರಿತ ಫೋಟೋ ಸಲ್ಲಿಕೆಯೂ ಕಡ್ಡಾಯವಾಗಿರಲಿದೆ. ಯುಪಿಎಸ್ ಸಿ ಸೇರಿ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ನಡೆಸಲು ಅನುಕೂಲವಾಗುವಂತೆ ದೆಹಲಿಯಲ್ಲಿ ಕರ್ನಾಟಕ ಭವನ-4 ನಿರ್ಮಿಸಲು 80 ಕೋಟಿ ರೂಪಾಯಿ ವಿನಿಯೋಗಿಸಲಾಗುತ್ತದೆ. ಪ್ರಸ್ತಾವನೆಗೆ ಅನುಮೋದನೆ ನೀಡಲಾಗಿದೆ. ಪ್ರವೇಶಾತಿಯಲ್ಲಿ ಶೇ. 50ರಷ್ಟು ಸ್ಥಾನಗಳನ್ನು ಎಸ್‌ಸಿ/ಎಸ್‌ಟಿ ವಿದ್ಯಾರ್ಥಿಗಳಿಗೆ, ಉಳಿದ ಅವಕಾಶಗಳನ್ನು ಇತರ ವರ್ಗಗಳಿಗೆ ನೀಡಲಾಗುತ್ತದೆ ಎಂದರು.

ದೇವನಹಳ್ಳಿಯ ಚನ್ನರಾಯಪಟ್ಟಣದಲ್ಲಿ ಕೆಐಎಡಿಬಿಗೆ ಸ್ವಯಂ ಪ್ರೇರಿತವಾಗಿ ಜಮೀನು ನೀಡಲು ಇದ್ದ ಕಾಲಾವಕಾಶವನ್ನು ವಿಸ್ತರಣೆ ಮಾಡುವ ತೀರ್ಮಾನವನ್ನು ಸಂಪುಟ ಕೈಗೊಂಡಿದೆ ಎಂದು ಅವರು ತಿಳಿಸಿದರು. ಡೀಸೆಲ್ ದರ ಏರಿಕೆ ಹಿನ್ನೆಲೆಯಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ದರ ಹೆಚ್ಚಳದ ಬಗ್ಗೆ ಪ್ರಸ್ತಾವನೆ ಬಂದಿದೆ. ಜನರಿಗೂ ಒಳ್ಳೆಯದಾಗಬೇಕು.

ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಕೂಡ ಉಳಿಯಬೇಕು. ಆದಷ್ಟು ಬೇಗ ಈ ಬಗ್ಗೆ ತೀರ್ಮಾನ ಕೈಗೊಳ್ಳುವುದಾಗಿ ಸಿಎಂ ತಿಳಿಸಿದರು.

ಯಾದಗಿರಿಯಲ್ಲಿ 100 ಕೋಟಿ ರೂ. ವೆಚ್ಚದಲ್ಲಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣಕ್ಕೆ ಸಂಪುಟ ಅನುಮೋದನೆ ನೀಡಿದೆ. ಹಾಗೆಯೇ ಸಂಡೂರಿನಲ್ಲಿ 30 ಕೋಟಿ ವೆಚ್ಚದಲ್ಲಿ ಬಸ್ ನಿಲ್ದಾಣಕ್ಕೂ ಒಪ್ಪಿಗೆ ನೀಡಲಾಗಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

> ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗೆ ಹೊಸದಾಗಿ 400 ಬಸ್ ಖರೀದಿಸಲು ಒಪ್ಪಿಗೆ ನೀಡಿದ್ದೇವೆ. ಹಾಗೆಯೇ ವಾಯುವ್ಯ ಸಾರಿಗೆ ಸಂಸ್ಥೆಗೂ 220 ಹೊಸ ಬಸ್‌ಗಳ ಖರೀದಿಗೂ ಸಂಪುಟ ಒಪ್ಪಿಗೆ ನೀಡಿದೆ ಎಂದು ಅವರು ಹೇಳಿದರು.

### ಜೆಡಿಎಸ್ ವಿರೋಧ

ಬಿಡದಿ ಟೌನ್ ಶಿಪ್‌ಗೆ ಜೆಡಿಎಸ್ ವಿರೋಧದ ಬಗ್ಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್, ನಾನು ಈ ಬಗ್ಗೆ ಮಾತನಾಡಲ್ಲ. ಹಿಂದೆ ಕುಮಾರಸ್ವಾಮಿ, ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದಾಗ ಏನು ಮಾಡಿದ್ದರೋ ಅದನ್ನು ನಾನು ಮುಂದುವರೆಸುತ್ತಿದ್ದೇನೆ ಅಷ್ಟೇ.

### ಜೈಲಿಗೆ ಹೋಗಲು ತಯಾರಿಲ್ಲ

ರಾಜಕಾರಣಕ್ಕಾಗಿ ಅವರು ಇದೆಲ್ಲಾ ಮಾಡುತ್ತಿದ್ದಾರೆ. ಅವರೇಗೆ ರೆಡ್ ಜೋನ್ ಮಾಡಿದರು. ಯಾರಿಗೂ ನಾನು ಜಮೀನು ಕೊಡಿ ಎಂದು ಬಲವಂತ ಮಾಡುತ್ತಿಲ್ಲ. ಭೂಮಿ ಡಿನೋಟಿಫೈ ಮಾಡಿ ನಾನು ಜೈಲಿಗೆ ಹೋಗಲು ತಯಾರಿಲ್ಲ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು

### ತಮಿಳು ನಾಡು ಸರ್ಕಾರದ ನಿರ್ಣಯ ಪರಿಶೀಲಿಸಿ ಪ್ರತಿಕ್ರಿಯೆ

ತಮಿಳುನಾಡು ವಿಧಾನಸಭೆಯು ಕರ್ನಾಟಕ ಸರ್ಕಾರದ ಮೇಕೆದಾಟು ಅಣೆಕಟ್ಟು ಯೋಜನೆಗೆ ವಿರೋಧ ವ್ಯಕ್ತಪಡಿಸಿ ಏಕಮತದಿಂದ ಅಂಗೀಕರಿಸಿರುವ ನಿರ್ಣಯವನ್ನು ಪರಿಶೀಲಿಸಿದ ಬಳಿಕವೇ ಈ ಬಗ್ಗೆ ವಿವರವಾದ ಪ್ರತಿಕ್ರಿಯೆ ನೀಡುವುದಾಗಿ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ನಿನ್ನೆ ಮಾತನಾಡಿದ ಅವರು, ಮೊದಲು ಆ ನಿರ್ಣಯವನ್ನು ನಾನು ಪರಿಶೀಲಿಸಬೇಕು. ಕೇವಲ ನಿಮ್ಮ ಹೇಳಿಕೆಯನ್ನು ಆಧರಿಸಿ ಪ್ರತಿಕ್ರಿಯಿಸಲು ಸಾಧ್ಯವಿಲ್ಲ. ಅವರ ನಿಲುವು ಏನೆಂಬುದನ್ನು ನೋಡಿದ ಬಳಿಕ ಪ್ರತಿಕ್ರಿಯಿಸುತ್ತೇನೆ ಎಂದು ಹೇಳಿದರು.

ಇದೇ ವೇಳೆ, ತಮಿಳು ನಾಡು ವಿಧಾನಸಭೆಯು ಮುಖ್ಯಮಂತ್ರಿ ಸಿ ಜೋಸೆಫ್ ವಿಜಯ್ ಮಂಡಿಸಿದ ಮೇಕೆದಾಟು ಅಣೆಕಟ್ಟು ಯೋಜನೆ ವಿರೋಧಿ ನಿರ್ಣಯವನ್ನು ಏಕಮತದಿಂದ ಅಂಗೀಕರಿಸಿದೆ. ಈ ನಿರ್ಣಯಕ್ಕೆ ಕಾಂಗ್ರೆಸ್ ಹಾಗೂ ವಿಸಿಕೆ ಸೇರಿದಂತೆ ಎಲ್ಲಾ ಪಕ್ಷಗಳ ಬೆಂಬಲ ದೊರೆತಿದ್ದು, ಯೋಜನೆಗೆ ವಿರೋಧವಾಗಿ ರಾಜ್ಯ ವಿಧಾನಸಭೆಯ ಒಗ್ಗಟ್ಟಿನ ನಿಲುವು ವ್ಯಕ್ತವಾಗಿದೆ.ಈ ನಿರ್ಣಯದಲ್ಲಿ, ಮೇಕೆದಾಟು ಯೋಜನೆಯು ಕಾವೇರಿ ಜಲ ವಿವಾದ ನ್ಯಾಯಾಧೀಕರಣ ನೀಡಿದ ಅಂತಿಮ ತೀರ್ಪು ಹಾಗೂ ಸುಪ್ರೀಂ ಕೋರ್ಟ್ ಆದೇಶಗಳನ್ನು ಉಲ್ಲಂಘಿಸುತ್ತದೆ ಎಂದು ಉಲ್ಲೇಖಿಸಲಾಗಿದೆ. ಜೊತೆಗೆ, ಸಂಬಂಧಿತ ನದಿ ತೀರದ ರಾಜ್ಯಗಳ ಒಪ್ಪಿಗೆ ಪಡೆಯದೆ ಹಾಗೂ ಕೇಂದ್ರ ಸರ್ಕಾರದ ಅನುಮೋದನೆ ಇಲ್ಲದೆ ಯೋಜನೆಯನ್ನು ಮುಂದುವರಿಸುವುದು ಸ್ವೀಕಾರಾರ್ಹವಲ್ಲ ಎಂದು ತಿಳಿಸಲಾಗಿದೆ.



### ಸದನ ತೀವ್ರ ವಿರೋಧ

ನಿರ್ಣಯದಲ್ಲಿ, ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟುವಿನಲ್ಲಿ ಅಣೆಕಟ್ಟು ನಿರ್ಮಿಸಲು ಕರ್ನಾಟಕ ಸರ್ಕಾರ ನಡೆಸುತ್ತಿರುವ ಏಕಪಕ್ಷೀಯ ಪ್ರಯತ್ನಕ್ಕೆ ಈ ಸದನ ತೀವ್ರ ವಿರೋಧ ವ್ಯಕ್ತಪಡಿಸುತ್ತದೆ. ಇದು ಯಾವುದೇ ರೀತಿಯಲ್ಲೂ ಅಂಗೀಕಾರಾರ್ಹವಲ್ಲ ಎಂದು ಹೇಳಲಾಗಿದೆ. ಇದಲ್ಲದೆ, ಮೇಕೆದಾಟು ಯೋಜನೆಗೆ ತಾಂತ್ರಿಕ ಮತ್ತು ಪರಿಸರ ಅನುಮತಿ ಸೇರಿದಂತೆ ಯಾವುದೇ ರೀತಿಯ ಅನುಮೋದನೆ ನೀಡಬಾರದು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗಿದೆ.

## ಬೆಂಗಳೂರಲ್ಲಿ ಪ್ರೀಮಿಯಂ ಎಫ್‌ಎಆರ್ ಯೋಜನೆಗೆ ಹೈಕೋರ್ಟ್ ಗ್ರೀನ್ ಸಿಗ್ನಲ್

• ಉದಯವಾಹಿನಿ, ಬೆಂಗಳೂರು

ರಾಜಧಾನಿಯಲ್ಲಿ ನಿರ್ಮಾಣ ಮಾಡಿರುವ ಕಟ್ಟಡಗಳಿಗೆ ಹೆಚ್ಚುವರಿ ಅಂತಸ್ತುಗಳನ್ನು ನಿರ್ಮಿಸಿಕೊಳ್ಳಲು ಅವಕಾಶ ಕಲ್ಪಿಸುವಂತಹ ಪ್ರೀಮಿಯಂ ಫ್ಲೋರ್ ಏರಿಯಾ ರೇಷಿಯೋ (ಪಿಎಫ್‌ಎಆರ್)ದ ಸಾಂವಿಧಾನಿಕ ಸಿಂಧುತ್ವವನ್ನು ಹೈಕೋರ್ಟ್ ಎತ್ತಿಹಿಡಿದಿದೆ.

ಅಲ್ಲದೆ, ಕಟ್ಟಡ ನಿರ್ಮಾಣ ಮಿತಿಯನ್ನು ಮೀರಿ ಹೆಚ್ಚುವರಿ ನಿರ್ಮಾಣ ಹಕ್ಕುಗಳನ್ನು ಪಡೆಯಲು ಡೆವಲಪರ್ಸ್ ಹಾಗೂ ಭೂಮಾಲೀಕರು ಸರ್ಕಾರಕ್ಕೆ ನಿಗದಿತ ಶುಲ್ಕ ಪಾವತಿಸಿ ಅವಕಾಶ ಪಡೆಯುವ ಈ ಯೋಜನೆ ಕಾನೂನು ಬದ್ಧವಾಗಿದೆ ಎಂದು ನ್ಯಾಯಪೀಠ ಹೇಳಿದೆ.

ಪಿಎಫ್‌ಎಆರ್ ಯೋಜನೆಯನ್ನು ಪ್ರಶ್ನಿಸಿ ಸಿಟಿಜನ್ ಆಕ್ಷನ್ ಫೋರಂನ ವಿಜಯನ್ ಮೆನನ್ ಮತ್ತಿತರರು ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಮತ್ತು ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರಿದ್ದ ವಿಭಾಗೀಯ ಪೀಠ ಈ ಆದೇಶ ನೀಡಿದ್ದು, ಅರ್ಜಿ ವಜಾಗೊಳಿಸಿದೆ.

ಎಫ್‌ಎಆರ್ ಹೆಚ್ಚಳದಿಂದ ನಾಗರಿಕರ ಜೀವನಮಟ್ಟ ಕುಸಿಯುತ್ತದೆ ಎಂಬುದನ್ನು ಸಾಬೀತುಪಡಿಸುವ ಯಾವುದೇ ದಾಖಲೆಗಳಿಲ್ಲ.

ಆದ್ದರಿಂದ ಇದು ಸಂವಿಧಾನದ 21ನೇ ವಿಧಿಯ ಅಡಿಯಲ್ಲಿ ಇರುವ ಜೀವಿಸುವ ಹಕ್ಕನ್ನು ಉಲ್ಲಂಘಿಸುತ್ತದೆ ಎನ್ನಲು ಸಾಧ್ಯವಿಲ್ಲ. ಅಲ್ಲದೆ, ಸಂವಿಧಾನದ 300ಎ ವಿಧಿಯು ಆಸ್ತಿಯ ಮಾರುಕಟ್ಟೆ ಮೌಲ್ಯವನ್ನು ಸದಾ ಒಂದೇ ಮಟ್ಟದಲ್ಲಿ ಉಳಿಸಬೇಕು ಎಂಬ ಭರವಸೆ ನೀಡುವುದಿಲ್ಲ.



ಉದಯವಾಹಿನಿ ಚಿತ್ರ

ಸರ್ಕಾರದ ನೀತಿ ಬದಲಾವಣೆಗಳಿಂದ ಆಸ್ತಿಯ ಮೌಲ್ಯದಲ್ಲಿ ಏರಿಳಿತ ಉಂಟಾಗಬಹುದಾಗಿ. ಹಾಗಾದಲ್ಲಿ ಆಸ್ತಿ ಹಕ್ಕು ಉಲ್ಲಂಘನೆಯಾಗುವುದಿಲ್ಲ ಎಂದು ಪೀಠ ಸ್ಪಷ್ಟಪಡಿಸಿದೆ. ಜೊತೆಗೆ, 9 ಮೀಟರ್‌ಗಿಂತ ಹೆಚ್ಚು ಹಾಗೂ 12 ಮೀಟರ್ ಗಿಂತ ಕಡಿಮೆ ಅಗಲದ ರಸ್ತೆಗಳಿಗೆ ಹೊಂದಿಕೊಂಡಿರುವ ಜಾಗಗಳಲ್ಲಿ ಹೆಚ್ಚುವರಿ ಎಫ್‌ಎಆರ್ ಪಡೆಯಲು ಟಿಡಿಆರ್ ಮಾತ್ರ ಬಳಸಬಹುದಾಗಿದೆ. ಈ ಪ್ರದೇಶಗಳಲ್ಲಿ ಪ್ರೀಮಿಯಂ ಎಫ್‌ಎಆರ್ ಅನ್ವಯಿಸುವುದಿಲ್ಲ ಎಂದು ನ್ಯಾಯಾಲಯ ಗಮನಿಸಿದೆ. ಹೀಗಾಗಿ ಟಿಡಿಆರ್ ಸಂಪೂರ್ಣವಾಗಿ ಮೌಲ್ಯ ಕಳೆದುಕೊಳ್ಳುತ್ತದೆ ಎಂಬ ವಾದವನ್ನು ಒಪ್ಪಲಾಗುವುದಿಲ್ಲ ಎಂದು ಪೀಠ ಹೇಳಿದೆ.

ಪಿಎಫ್‌ಎಆರ್ ಯೋಜನೆಯು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಅಕ್ರಮ-ಸಕ್ರಮ ಯೋಜನೆಯನ್ನು ಪರೋಕ್ಷವಾಗಿ ಮರುಜಾರಿಗೊಳಿಸುವ ಪ್ರಯತ್ನವಾಗಿದೆ ಎಂಬ ವಾದವನ್ನೂ ನ್ಯಾಯಾಲಯ ತಳ್ಳಿಹಾಕಿದೆ. ಪ್ರೀಮಿಯಂ ಎಫ್‌ಎಆರ್ ಯೋಜನೆಯು ಅಕ್ರಮ ಕಟ್ಟಡಗಳನ್ನು ಸಕ್ರಮಗೊಳಿಸುವುದಿಲ್ಲ.

## ಯೋಗ ದಿನಾಚರಣೆ: ಭಾನುವಾರ ಬೆಳಗ್ಗೆ 5 ಗಂಟೆಯಿಂದಲೇ 'ನಮ್ಮ ಮೆಟ್ರೋ' ಸಂಚಾರ ಆರಂಭ

• ಉದಯವಾಹಿನಿ, ಬೆಂಗಳೂರು

ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಭಾನುವಾರ (ಜೂನ್ 21)ದಂದು ಮುಂಜಾನೆ 5 ಗಂಟೆಯಿಂದಲೇ ನಮ್ಮ ಮೆಟ್ರೋ ರೈಲು ಸೇವೆಗಳು ಆರಂಭವಾಗಲಿವೆ. ನಗರದಾದ್ಯಂತ ನಡೆಯುವ ಯೋಗ ಕಾರ್ಯಕ್ರಮಗಳಲ್ಲಿ ಸಾರ್ವಜನಿಕರು ಸುಲಭವಾಗಿ ಭಾಗವಹಿಸಲು ಅನುಕೂಲವಾಗುವಂತೆ ಜೂನ್ 21ರಂದು ಮುಂಜಾನೆ 5 ಗಂಟೆಯಿಂದಲೇ ಮೆಟ್ರೋ ರೈಲು ಸೇವೆಗಳು ಲಭ್ಯವಿರಲಿವೆ ಎಂದು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ ಪ್ರಕಟಿಸಿದೆ.ಾಮಾನ್ಯವಾಗಿ ಭಾನುವಾರಗಳಂದು ಮೆಟ್ರೋ ಸಂಚಾರ ಬೆಳಗ್ಗೆ 7 ಗಂಟೆಗೆ ಆರಂಭವಾಗುತ್ತದೆ. ಆದರೆ, ನಾಳೆ ಅಂತಾರಾಷ್ಟ್ರೀಯ ಯೋಗ ದಿನದ ನಿಮಿತ್ತ 2 ಗಂಟೆ ಮುಂಚಿತವಾಗಿ, ಅಂದರೆ ಬೆಳಗ್ಗೆ 5 ಗಂಟೆಗೇ ಎಲ್ಲಾ ಮೆಟ್ರೋ ಮಾರ್ಗಗಳ ಟರ್ಮಿನಲ್ ನಿಲ್ದಾಣಗಳಿಂದ ವಾಣಿಜ್ಯ ಸೇವೆಗಳು ಪ್ರಾರಂಭವಾಗಲಿವೆ.

ಆರೋಗ್ಯಕರ ಜೀವನಶೈಲಿಯತ್ತ ಹೆಜ್ಜೆ ಇಡುವ ಈ ಮಹತ್ವದ ದಿನದಂದು ಸಾರ್ವಜನಿಕರು ಯೋಗ ದಿನಾಚರಣೆಯಲ್ಲಿ ಉತ್ಸಾಹದಿಂದ ಭಾಗವಹಿಸಬೇಕು. ಕಾರ್ಯಕ್ರಮಗಳಿಗೆ ತೆರಳಲು ಈ ಮುಂಜಾನೆಯ ವಿಶೇಷ ಮೆಟ್ರೋ ಸೌಲಭ್ಯವನ್ನು ಪಡೆದುಕೊಂಡು, ನಿಮ್ಮ ಪ್ರಯಾಣವನ್ನು ಸುಲಭವಾಗಿ ಯೋಜಿಸಿಕೊಳ್ಳಿ' ಎಂದು ಬಿಎಂಆರ್‌ಸಿಎಲ್ ತಿಳಿಸಿದೆ.

ಈ ಯೋಗ ದಿನದಂದು ಪ್ರಧಾನಿ ಮೋದಿ ಜೊತೆಗೆ ಯೋಗ ನಡೆಸಲು ದೇಶಾದ್ಯಂತ ವಿವಿಧ ಸಂಸ್ಥೆ ಮತ್ತು ಸಮುದಾಯಗಳು ಮುಂದಾಗಿದ್ದು, ಬರೋಬ್ಬರಿ 6 ಲಕ್ಷ ನೋಂದಣಿ ಆಗಿವೆ ಎಂದು ಆಯುಷ್ ಸಚಿವಾಲಯದ ಯೋಗ ಸಂಗಮ ಪೋರ್ಟಲ್ ಅಧಿಕೃತ ಹೇಳಿಕೆಯಲ್ಲಿ ಪ್ರಕಟಿಸಲಾಗಿದೆ. 2026ರ ಅಂತಾರಾಷ್ಟ್ರೀಯ ಯೋಗ ದಿನದ ಉಪಕ್ರಮವನ್ನು ಈ ಯೋಗ ಸಂಗಮ ನಡೆಸಿದ್ದು, ಈ ಮೂಲಕ ಸಾಮಾನ್ಯ ಯೋಗ ಶಿಷ್ಟಾಚಾರ ಆಧಾರಿತ ಸಿಂಕ್ರೊನೈಸ್ಡ್ ಯೋಗ ಅವಧಿಗಳ ಮೂಲಕ ದೇಶಾದ್ಯಂತ ಸಂಸ್ಥೆಗಳು ಮತ್ತು ಸಮುದಾಯಗಳನ್ನು ಸಂಪರ್ಕಿಸುವ ಗುರಿಯನ್ನು ಹೊಂದಿದೆ.

ಒಂದೇ ಸ್ಥಳದ ಆಚರಣೆಯನ್ನು ಮೀರಿ, ಈ ಉಪಕ್ರಮವು ಭಾರತದಾದ್ಯಂತ ಸಂಸ್ಥೆಗಳು ಒಂದು ಸಾಮೂಹಿಕ ರಾಷ್ಟ್ರೀಯ ಚಳವಳಿಯ ಭಾಗವಾಗುವುದರೊಂದಿಗೆ ತಮ್ಮದೇ ಆದ ಸ್ಥಳಗಳಲ್ಲಿ ಯೋಗ ಅವಧಿಗಳನ್ನು ನಡೆಸಲು ಅನುವು ಮಾಡಿಕೊಡುತ್ತದೆ.

## ಆಟವಾಡುವಾಗ ಕಾಂಪೌಂಡ್ ಕುಸಿದು ಬಾಲಕ ಸಾವು, ಬಾಲಕಿಗೆ ಗಂಭೀರ ಗಾಯ

• ಉದಯವಾಹಿನಿ, ಬೆಂಗಳೂರು

ಆಟವಾಡುವಾಗ ಕಾಂಪೌಂಡ್ ಕುಸಿದು ಐದು ವರ್ಷದ ಬಾಲಕ ಮೃತಪಟ್ಟು, ಮತ್ತೋರ್ವ ಬಾಲಕಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ನಗರದ ಬಾಗಲೂರು ಪೊಲೀಸ್ ಠಾಣಾ ವ್ಯಾಪ್ತಿಯ ಬಂಡಿಕೊಡಿಗೆಹಳ್ಳಿಯಲ್ಲಿ ಸಂಜೆ ನಡೆದಿದೆ. ಅಫ್ರಿನ್ (5) ಸಾವನ್ನಪ್ಪಿದ ಬಾಲಕ. ಸಮನ್ವಿ (5) ಗಾಯಗೊಂಡ ಬಾಲಕಿ.

ಸಂಜೆ ಮನೆಯ ಅಂಗಳದಲ್ಲಿ ಅಕ್ಕಪಕ್ಕದ ಮನೆ ಮಕ್ಕಳು ಆಟವಾಡುತ್ತಿದ್ದಾಗ ಏಕಾಏಕಿ ಕಾಂಪೌಂಡ್ ಗೋಡೆ ಕುಸಿದಿದ್ದು, ಅಫ್ರಿನ್ ಹಾಗೂ ಸಮನ್ವಿ ಮೇಲೆ ಬಿದ್ದಿದೆ.

ಬಾಲಕನ ಮೃತದೇಹವನ್ನು ಅಂಬೇಡ್ಕರ್ ಆಸ್ಪತ್ರೆಗೆ ರವಾನಿಸಲಾಗಿದೆ. ಗಾಯಗೊಂಡಿರುವ ಬಾಲಕಿಯನ್ನು ಯಲಹಂಕ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಅಫ್ರಿನ್ ತಾಯಿ ಗೃಹಿಣಿಯಾಗಿದ್ದರೆ, ತಂದೆ ಕ್ಯಾಬ್ ಡ್ರೈವರ್ ಆಗಿ ಕೆಲಸ ಮಾಡುತ್ತಿದ್ದಾರೆ.

ಕಾಂಪೌಂಡ್ ಮಾಲೀಕರ ವಿರುದ್ಧ ನಿರ್ಲಕ್ಷ್ಯ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ ಎಂದು ಬಾಗಲೂರು ಪೊಲೀಸರು ಮಾಹಿತಿ ನೀಡಿದ್ದಾರೆ.

# ವೋಟ್ ಹಾಕಿದರೆ 40-50 ಕೋಟಿ ಅನುದಾನ ಕೊಡುವ ಟೆಮ್ಟ್ ಮಾಡಿದ್ದಾರೆ

## ನಮ್ಮ ಮತ್ತು ಬಿಜೆಪಿ ನಡುವೆ ಯಾವುದೇ ಹೊಂದಾಣಿಕೆ ಕೊರತೆ ಇಲ್ಲ: ಕೇಂದ್ರ ಸಚಿವ ಕುಮಾರಸ್ವಾಮಿ

• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ ಚುನಾವಣೆಯಲ್ಲಿ ತಮ್ಮ ಪಕ್ಷಕ್ಕೆ ವೋಟ್ ಹಾಕಿದರೆ 40-50 ಕೋಟಿ ಅನುದಾನ ಕೊಡಲಾಗುವುದು ಎಂಬ ಟೆಮ್ಟ್ ಮಾಡಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಆರೋಪಿಸಿದರು.

ಬೆಂಗಳೂರು ಜೆಡಿಎಸ್ ಕಚೇರಿಯಲ್ಲಿ ಮಾತನಾಡಿದ ಅವರು, ಸರ್ಕಾರದ ಆಮಿಷ, ಕ್ಷೇತ್ರದಲ್ಲಿ ವಿಶ್ವಾಸ ಗಳಿಸಲು ,ಕ್ಷೇತ್ರದಲ್ಲಿ ಕೆಲಸ ಆಗಿಲ್ಲ ಎನ್ನುವುದು ಸಹ ಈ ಚುನಾವಣೆಯ ಮೇಲೆ ಪರಿಣಾಮ ಬೀರಿದೆ. 50-100 ಕೋಟಿ ಅನುದಾನ ಸಿಗುತ್ತದೆ ಎಂದು ಕೆಲವರು ಚಂಚಲ ಆಗಿರಬಹುದು. ಬಿಜೆಪಿ, ಜೆಡಿಎಸ್‌ನಲ್ಲಿ ಬಿರುಕು ಮೂಡಿಸುವುದು ಕಾಂಗ್ರೆಸ್‌ಗೆ ಬೇಕಿದೆ. ಈ ಚುನಾವಣೆಯು ಮುಂದಿನ 2028ರ ಚುನಾವಣೆಯ ಮೇಲೆ ಪರಿಣಾಮ ಬೀರಲ್ಲ. ನಮ್ಮ ಮತ್ತು ಬಿಜೆಪಿ ನಡುವೆ ಯಾವುದೇ ಹೊಂದಾಣಿಕೆ ಕೊರತೆ ಇಲ್ಲ ಎಂದು ಸ್ಪಷ್ಟಪಡಿಸಿದರು.

ಇದನ್ನು ಇನ್ನೂ ಎಳೆದುಕೊಂಡು ಹೋಗುವ ಅವಶ್ಯಕತೆ ಇಲ್ಲ. ನನ್ನ ಗುರಿ ಇರುವಂತದ್ದು 2028. ಈ ರಾಜ್ಯದಲ್ಲಿ ನಿಜವಾದ ಜನಪರ, ಜನತೆಯ ನಿರೀಕ್ಷೆಗಳಿಗೆ ಕೆಲಸ ಮಾಡುವಂತಹ ಸರ್ಕಾರ ತರಬೇಕು.

ನಾನು ಈಗಾಗಲೇ ಗುರಿ ಇಟ್ಟಿದ್ದೇನೆ. ಮುಖ್ಯಮಂತ್ರಿ ಸ್ಥಾನ, ಅವೆಲ್ಲ ಆಮೇಲೆ. ಮೊದಲು ಇಲ್ಲಿನ ಕೆಟ್ಟ ಸರ್ಕಾರ ಹೋಗಬೇಕು ಎಂದರು. ಈ ರಾಜ್ಯದ ಸಿಎಂ ಎಲ್ಲಾ ಅಧಿಕಾರಿಗಳ ಸಭೆಯಲ್ಲಿ ಒಂದು ಮಾತು ಹೇಳುತ್ತಾರೆ. ಯಾವುದೇ ಕಚೇರಿಯಲ್ಲಿ 10 ರೂಪಾಯಿ ಯಾರಾದರೂ ಲಂಚ ಕೇಳಿದರೂ ಅದೇನೋ ಫೋನ್ ನಂಬರ್ ಇಡುತ್ತಾರಂತೆ, ಕೂಡಲೇ ಆ ಫೋನಿಗೆ ಮೆಸೇಜ್ ಬರುತ್ತಂತೆ. ಅವರು ಎಲ್ಲಿ ಫೋನ್ ಇಡುತ್ತಾರೋ ಗೊತ್ತಿಲ್ಲ. ಈ ಚುನಾವಣೆಯಲ್ಲಿ ಹತ್ತು ರೂಪಾಯಿ ಅಲ್ಲ. ಅದು ಬಹಳ ನಡೆದಿರಬಹುದು. ತನಿಖೆ ಮಾಡಿ ಅಂತ ಯಾರಿಗೆ ದೂರು ಕೊಡುವುದು ಎಂದು ಟೀಕಿಸಿದರು.

**ನನಗೆ ಹೇಳಿದರೆ ಸಂತೋಷವಾಗಿ ಕಳಿಸಿಕೊಡುತ್ತೇನೆ:** 2028ರಲ್ಲಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಬೇಕಾಗುತ್ತದೆ. ಅಗತ್ಯ ನಿರ್ಧಾರಗಳನ್ನು ಮಾಡುತ್ತೇವೆ. ಇದನ್ನು ಗಮನದಲ್ಲಿಟ್ಟುಕೊಂಡೇ ಮುಂದಿನ ನಿರ್ಧಾರ ಮಾಡುತ್ತೇವೆ. ಶಾಸಕರಿಗೆ ನಿಮ್ಮ ಭವಿಷ್ಯಕ್ಕೆ ನಾನು ತೊಂದರೆ ಕೊಡುವುದಿಲ್ಲ. ಹೋಗಬೇಕು ಅಂದರೆ ಧೈರ್ಯವಾಗಿ ನನಗೆ ಹೇಳಿಯೇ ಹೋಗಿ ಅಂತ ಹೇಳಿದ್ದೇನೆ. ಆದರೆ ಈ ರೀತಿ ಮಾಡಬೇಡಿ ಎಂಬುದನ್ನು ನೇರವಾಗಿ ತಿಳಿಸಿದ್ದೇನೆ. ನಮ್ಮ ಪಕ್ಷದಲ್ಲಿ ಭವಿಷ್ಯ ಇಲ್ಲ ಅಂತ ನಿಮ್ಮ ಮನಸ್ಸಿನಲ್ಲಿದ್ದರೆ ನನಗೆ ನೇರವಾಗಿ ಹೇಳಿ ಅಂದಿದ್ದೇನೆ. ನನಗೆ ನೇರವಾಗಿ ಹೇಳಿ ಹೋಗುವಂತಹ ನಿರ್ಧಾರ ಮಾಡಿದ್ದರೆ ನಾನು ಸಂತೋಷವಾಗಿ ಕಳಿಸಿಕೊಡುತ್ತೇನೆ ಎಂದರು.


ಉದಯವಾಹಿನಿ ಚಿತ್ರ

**ಒಂದೆರಡು ಜನ ಚೆಕ್ ತೆಗೆದುಕೊಂಡಿರಬಹುದು:** ಬಿಡದಿ ಟೌನ್‌ಶಿಪ್ ಹೋರಾಟ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಸದನದಲ್ಲಿ ಈ ವಿಚಾರ ಹಿಂದೆಯೇ ಚರ್ಚೆ ಆಗಿತ್ತು. ರಾಜ್ಯದಲ್ಲಿನ ಐದು ಟೌನ್‌ಶಿಪ್ ವಿಚಾರವೂ ಚರ್ಚೆ ಆಗಿತ್ತು. ಆಗ ಕಾಂಗ್ರೆಸ್ ಸತ್ಯಶೋಧನಾ ಸಮಿತಿ ರಚಿಸಿತ್ತು. ನಾನು ಬಿಡದಿ ವಿಚಾರದಲ್ಲಿ ಸದನದಲ್ಲಿ ಏನು ಹೇಳಿದ್ದೇನೆ ರೈತರ ಒಂದಿಂಚೂ ಫಲವತ್ತಾದ ಭೂಮಿ ಸ್ವಾಧೀನ ಮಾಡುವ ವಿಚಾರ ಇಲ್ಲ ಎಂದಿದ್ದೇನೆ. ನಾಡಿದ್ದು ನಾನು ಒಂದು , ಮಾಧ್ಯಮಗೋಷ್ಠಿ ನಡೆಸಿ ಎಲ್ಲವನ್ನೂ ಹೇಳುತ್ತೇನೆ. ಶಾಸಕರನ್ನು ಕಳಿಸಿ ಚೆಕ್ ಕೊಟ್ಟಿದ್ದಾರೆ.

ಎಲ್ಲೋ ಒಂದೆರಡು ಜನ ಚೆಕ್ ತೆಗೆದುಕೊಂಡಿರಬಹುದು. ಭೂ ಸ್ವಾಧೀನ ಅಧಿಕಾರಿ ಇರುತ್ತಾನೆ. 2 ಕೋಟಿ 30 ಲಕ್ಷ ರೂ.ಗಳ ಚೆಕ್ ಕೊಟ್ಟು ಟೆಮ್ಟ್ ಮಾಡಿದ್ದಾರೆ. 20 ವರ್ಷಕ್ಕೆ 2 ಕೋಟಿ ಎಫ್‌ಡಿ ಇಟ್ಟರೆ 40 ಲಕ್ಷ ಸಿಗಬಹುದು. ಆದರೆ ಜಮೀನನ್ನು ಹಾಗೆಯೇ ಇಟ್ಟುಕೊಂಡರೆ ಅದೇ ಜಮೀನು ಬೆಲೆ 20 ಕೋಟಿ ರೂ. ಆಗುತ್ತದೆ ಎಂದು ಕುಮಾರಸ್ವಾಮಿ ತಿಳಿಸಿದರು.

### ನನ್ನ ಗುರಿ 2028ರ ಚುನಾವಣೆ

ಈ ಬಗ್ಗೆ ಸತ್ಯ ಅರಿಯಲು ಬಿಜೆಪಿ ಮೂವರು ಸದಸ್ಯರ ತಂಡ ಮಾಡಿದ್ದಾರೆ. ಸಿ.ಟಿ. ರವಿಗೆ ಜವಾಬ್ದಾರಿ ಕೊಟ್ಟಿದ್ದಾರೆ. ನಾನು ದೆಹಲಿಗೆ ಹೋದಾಗ ಬಿಜೆಪಿಯ ರಾಷ್ಟ್ರೀಯ ಅಧ್ಯಕ್ಷರನ್ನು ಭೇಟಿ ಮಾಡುತ್ತೇನೆ.

ಇವೆಲ್ಲದರ ಮಾಹಿತಿಗಳನ್ನು ಅವರಿಗೆ ಕೊಡಲು ನಾನೂ ನಿರ್ಧಾರ ಮಾಡಿದ್ದೇನೆ. ನಿನ್ನೆ ನಮ್ಮ ಶಾಸಕರುಗಳು ಅಂತಿಮವಾದ ನಿರ್ಣಯ ಮಾಡುವ ಜವಾಬ್ದಾರಿಯನ್ನು ನನಗೆ ಕೊಟ್ಟಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಸಂಜೆ | 04:30 ರಿಂದ 06:00 |
| ಗುಳಿಕ ಕಾಲ | ಮಧ್ಯಾಹ್ನ | 03:00 ರಿಂದ 04:30 |
| ಯಮಗಂಡ ಕಾಲ | ಮಧ್ಯಾಹ್ನ | 12:00 ರಿಂದ 01:00 |

**ಮೇಷ** ನಿಮ್ಮ ದೈಹಿಕ ಬಲವನ್ನು ನಿರ್ವಹಿಸಲು ನೀವು ಕ್ರೀಡೆಯಲ್ಲಿ ಸಮಯ ಕಳೆಯುವ ಸಾಧ್ಯತೆಗಳಿವೆ. ನೀವು ಇತರರ ಮೇಲೆ ಹೆಚ್ಚು ಖರ್ಚು ಮಾಡಬಯಸುತ್ತೀರಿ. ಇತರರಿಗೆ ಮುಜುಗರ ಉಂಟುಮಾಡಬೇಡಿ ಮತ್ತು ನಿಮ್ಮ ಕುಟುಂಬದ ಅವಶ್ಯಕತೆಗಳಿಗೆ ಹೊಂದಿಕೊಳ್ಳಲು ಪ್ರಯತ್ನಿಸಿ.

**ವೃಷಭ** ಸರ್ವತೋಮುಖ ಅಭಿವೃದ್ಧಿ ಸಾಧ್ಯವಿದ್ದಾಗ ಮಾತ್ರ ಮಾನಸಿಕ ಮತ್ತು ನೈತಿಕ ಶಿಕ್ಷಣದ ಜೊತೆ ದೈಹಿಕ ಶಿಕ್ಷಣವನ್ನೂ ತೆಗೆದುಕೊಳ್ಳಿ. ಆರೋಗ್ಯಕರ ಮನಸ್ಸು ಯಾವಾಗಲೂ ಆರೋಗ್ಯಕರ ದೇಹದಲ್ಲಿ ಪರ್ಯವಸಾನವಾಗುತ್ತದೆಂದು ನೆನಪಿಡಿ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ.

**ಮಿಥುನ** ಕೆಲಸದ ಒತ್ತಡ ಇಂದು ಸ್ವಲ್ಪ ಒತ್ತಡ ತರಬಹುದು. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ. ಅವರೊಂದಿಗೆ ನಿಮ್ಮ ಗುಣಮಟ್ಟದ ಸಮಯ ಕಳೆಯಿರಿ.

**ಕರ್ಕಾಟಕ** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಹೂಡಿಕೆ ಮಾಡುವುದು ಅನೇಕ ಬಾರಿ ನಿಮಗೆ ಪ್ರಯೋಜನಕಾರಿಯೆಂದು ಸಾಬೀತುಪಡಿಸುತ್ತದೆ, ಇಂದು ನಿಮಗೆ ಈ ಮಾತು ಅರ್ಥವಾಗಬಹುದು ಏಕೆಂದರೆ ಯಾವುದೇ ಹಳೆಯ ಹೂಡಿಕೆಯಿಂದ ನೀವು ಪ್ರಯೋಜನವನ್ನು ಪಡೆಯಬಹುದು.

**ಸಿಂಹ** ನಿಮ್ಮ ಖ್ಯಾತಿಯಲ್ಲಿ ನೀವು ಹೊಸ ರತ್ನವೊಂದನ್ನು ಸೇರಿಸಿಕೊಳ್ಳುತ್ತಿದ್ದ ಹಾಗೆ ನಿಮ್ಮ ಸಾಧನೆ ನಿಮ್ಮ ಕುಟುಂಬದ ಸದಸ್ಯರ ಚೈತನ್ಯಗಳನ್ನು ಉತ್ತಮವಾಗಿಸುತ್ತದೆ. ನಿಮ್ಮನ್ನು ಇತರರಿಗೆ ಒಂದು ಮಾದರಿಯಾಗಿಸಲು ಶ್ರಮಿಸಿ. ಏಕಪಕ್ಷೀಯ ವ್ಯಾಮೋಹ ನಿಮಗೆ ಕೇವಲ ಎದೆಗುದಿ ತರುತ್ತದೆ.

**ಕನ್ಯಾ** ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು–ಇದು ನಿಮಗೆ ಆರ್ಥಿಕ ಲಾಭವನ್ನೂ ತರುತ್ತದೆ.

**ತುಲಾ** ಇಂದು ನಿಮ್ಮ ಪ್ರೇಮಿಯನ್ನು ನಿರಾಸೆಗೊಳಿಸಬೇಡಿ ಇದು ನಂತರ ನಿಮ್ಮನ್ನು ಪಶ್ಚಾತ್ತಾಪಗೊಳ್ಳುವಂತೆ ಮಾಡುತ್ತದೆ. ಸಮಯವನ್ನು ಚೆನ್ನಾಗಿ ಬಳಸುವುದನ್ನು ಕಲಿಯಿರಿ. ನಿಮ್ಮ ಹತ್ತಿರ ಉಚಿತ ಸಮಯವಿದ್ದರೆ, ಸೃಜನಾತ್ಮಕವಾಗಿ ಏನಾದರೂ ಮಾಡಲು ಪ್ರಯತ್ನಿಸಿ.

**ವೃಶ್ಚಿಕ** ಸಾಮಾಜಿಕ ಜೀವನಕ್ಕಿಂತ ಆರೋಗ್ಯಕ್ಕೆ ಆದ್ಯತೆ ನೀಡಬೇಕು. ಮನೆಯ ಅಗತ್ಯಗಳನ್ನು ನೋಡುತ್ತಾ, ಇಂದು ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು.

**ಧನಸ್ಸು** ಎಣ್ಣೆಯುಕ್ತ ಮತ್ತು ಮಸಾಲೆಯುಕ್ತ ಆಹಾರ ತಪ್ಪಿಸಿ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ. ನಿಮ್ಮ ಪ್ರಣಯದ ಸಂಬಂಧಕ್ಕೆ ಇಂದು ಹಾನಿಯಾಗುತ್ತದೆ.

**ಮಕರ** ನಿಮ್ಮ ಶೀಘ್ರ ಕ್ರಮ ನಿಮ್ಮನ್ನು ಪ್ರೇರೇಪಿಸುತ್ತದೆ. ಯಶಸ್ಸು ಸಾಧಿಸಲು–ಸಮಯದ ಜೊತೆ ನಿಮ್ಮ ಆಲೋಚನೆಗಳನ್ನು ಬದಲಾಯಿಸಿಕೊಳ್ಳಿ–ಇದು ನಿಮ್ಮ ದೃಷ್ಟಿಯನ್ನು ವಿಸ್ತಾರಗೊಳಿಸುತ್ತದೆ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುತ್ತದೆ– ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸುತ್ತದೆ ಮತ್ತು ನಿಮ್ಮ ಮನಸ್ಸನ್ನು ಪಕ್ವಗೊಳಿಸುತ್ತದೆ.

**ಕುಂಭ** ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ. ಇಂದು ಈ ರಾಶಿಚಕ್ರದ ಕೆಲವು ನಿರುದ್ಯೋಗಿಗಳಿಗೆ ಉದ್ಯೋಗ ಸಿಗಬಹುದು.

**ಮೀನ** ನಿಮಗೆ ತುಂಬ ಉನ್ನತ ಶಕ್ತಿಯಿರುವ ದಿನ ಮತ್ತು ನೀವು ಸಣ್ಣ ವಿಷಯಗಳಿಗೂ ಕಿರಿಕಿರಿಗೊಳ್ಳುತ್ತೀರಿ. ನೀವು ನಿಮ್ಮ ಕೋಪವನ್ನು ನಿಯಂತ್ರಿಸಿ ಮತ್ತು ಕಚೇರಿಯಲ್ಲಿ ಎಲ್ಲರೊಂದಿಗೆ ಉತ್ತಮವಾಗಿ ವರ್ತಿಸಿ., ಆಗೇ ನೀವು ಮಾಡದಿದ್ದರೆ ನಿಮ್ಮ ಕೆಲಸ ಹೋಗಬಹುದು. ಮನೆಯ ಚಟುವಟಿಕೆಗಳಲ್ಲಿ ತೊಡಗಿಕೊಂಡಿರಿ.

# ಕೃಷ್ಣಾ ನದಿಗೆ 2 ಟಿಎಂಸಿ ಅಡಿ ನೀರು ಬಿಡುಗಡೆ ಮಾಡಿ: ಮಹಾರಾಷ್ಟ್ರ ಸಿಎಂ ಫಡ್ನವೀಸ್ ಭೇಟಿ ಮಾಡಿದ ಸಿಎಂ ಡಿ ಕೆ ಶಿವಕುಮಾರ್

• **ಉದಯವಾಹಿನಿ, ಬೆಳಗಾವಿ:**

ಉತ್ತರ ಕರ್ನಾಟಕದ ಕೆಲವು ಭಾಗಗಳಲ್ಲಿ ಕುಡಿಯುವ ನೀರಿನ ಸಂಗ್ರಹದ ಮೇಲೆ ಒತ್ತಡ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ಕೃಷ್ಣಾ ನದಿಗೆ 2 ಟಿಎಂಸಿ ಅಡಿ ನೀರನ್ನು ಬಿಡುಗಡೆ ಮಾಡುವಂತೆ ಮನವಿ ಮಾಡಲು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಇಂದು ಶನಿವಾರ ಮುಂಬೈನಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರನ್ನು ಭೇಟಿ ಮಾಡಲಿದ್ದಾರೆ. ಈ ಸಭೆಯಿಂದ ಸಕಾರಾತ್ಮಕ ಫಲಿತಾಂಶ ಹೊರಬರಲಿದೆ ಎಂಬ ಆಶಾಭಾವನೆ ವ್ಯಕ್ತಪಡಿಸಿರುವ ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಬೇಸಿಗೆ ತಿಂಗಳುಗಳಲ್ಲಿ 2 ಟಿಎಂಸಿ ಅಡಿ ನೀರನ್ನು ಬಿಡುಗಡೆ ಮಾಡುವ ಹಿಂದಿನ ಪದ್ಧತಿಯನ್ನು


ಉದಯವಾಹಿನಿ ಚಿತ್ರ

ಮಹಾರಾಷ್ಟ್ರ ಸರ್ಕಾರ ಪುನರಾರಂಭಿಸಲಿದೆ ಎಂದು ರಾಜ್ಯ ಸರ್ಕಾರ ನಿರೀಕ್ಷಿಸುತ್ತಿದೆ ಎಂದು ತಿಳಿಸಿದ್ದಾರೆ. ಕಳೆದ ಐದರಿಂದ ಆರು ವರ್ಷಗಳಿಂದ ಈ ನೀರು ಬಿಡುಗಡೆ ಆಗಿಲ್ಲ ಎಂದು ಹೇಳಿದರು. ಮುಖ್ಯಮಂತ್ರಿಗಳು ಸ್ವತಃ ಮಹಾರಾಷ್ಟ್ರ ಮುಖ್ಯಮಂತ್ರಿ ಅವರೊಂದಿಗೆ ಮಾತನಾಡಿ ನೀರು ಬಿಡುಗಡೆ ಮಾಡುವ ಅಗತ್ಯವನ್ನು ಮನವರಿಕೆ ಮಾಡಿಕೊಡಲಿದ್ದಾರೆ. ಕುಡಿಯುವ ನೀರಿನ ಉದ್ದೇಶಕ್ಕಾಗಿ ಮಾತ್ರ ಬಳಸುವ 2 ಟಿಎಂಸಿ ಅಡಿ ನೀರು ನಮಗೆ ದೊರೆಯಲಿದೆ ಎಂಬ ವಿಶ್ವಾಸವಿದೆ ಎಂದು ರೋಷನ್ ಹೇಳಿದರು. ಆದಾಗ್ಯೂ, ತಕ್ಷಣದ ಕುಡಿಯುವ ನೀರಿನ ಬಿಕ್ಕಟ್ಟು ಎದುರಾಗುವ ಸಾಧ್ಯತೆ ಇಲ್ಲ ಎಂದು ರೋಷನ್ ಸ್ಪಷ್ಟಪಡಿಸಿದರು.

> ಜಾನುವಾರುಗಳಿಗೆ ಸಮರ್ಪಕವಾಗಿ ನೀರು ದೊರೆಯುವಂತೆ ಸ್ಥಳೀಯ ಸಂಸ್ಥೆಗಳಿಗೆ ನಿರಂತರ ಮೇಲ್ವಿಚಾರಣೆ ನಡೆಸುವಂತೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.
> ಜಿಲ್ಲಾಧಿಕಾರಿ

ಪ್ರಸ್ತುತ ಹಿಡಕಲ್ ಜಲಾಶಯದಲ್ಲಿ 5.5 ಟಿಎಂಸಿ ಅಡಿ ನೀರು ಹಾಗೂ ಮಲಪ್ರಭಾ ಜಲಾಶಯದಲ್ಲಿ 8 ಟಿಎಂಸಿ ಅಡಿ ನೀರು ಲಭ್ಯವಿದ್ದು, ಅದರಲ್ಲಿ ಸುಮಾರು 5 ಟಿಎಂಸಿ ಅಡಿ ನೀರನ್ನು ಬಳಸಬಹುದಾಗಿದೆ ಎಂದು ತಿಳಿಸಿದರು. ಲಭ್ಯವಿರುವ ನೀರಿನ ಸಂಗ್ರಹವನ್ನು ಸಂಪೂರ್ಣವಾಗಿ ಕುಡಿಯುವ ನೀರಿನ ಉದ್ದೇಶಕ್ಕೆ ಮೀಸಲಿಡಲಾಗಿದ್ದು, ಸದ್ಯಕ್ಕೆ ನೀರಾವರಿಗೆ ಯಾವುದೇ ನೀರು ಪೂರೈಸಲಾಗುವುದಿಲ್ಲ ಎಂದು ಹೇಳಿದರು.

# ಪ್ರಧಾನಮಂತ್ರಿ ವಿಕ್ಸಿತ್ ಭಾರತ್ ರೋಜಗಾರ್ ಯೋಜನೆ

## ಉದ್ಯೋಗಿ ಮತ್ತು ಉದ್ಯೋಗದಾತರಿಗೆ 2,400 ಕೋಟಿ ರೂ. ಪ್ರೋತ್ಸಾಹಧನ ವಿತರಣೆ

• **ಉದಯವಾಹಿನಿ, ಕಲಬುರಗಿ,**

ಕಳೆದ ಆಗಸ್ಟ್ 2025 ರಿಂದ ಹೊಸದಾಗಿ ಉದ್ಯೋಗಕ್ಕೆ ಸೇರಿದ ಉದ್ಯೋಗಿಗಳಿಗೆ ಮತ್ತು ಉದ್ಯೋಗ ನೀಡಿದ ಉದ್ಯೋಗದಾತರಿಗೆ ವಿಕಸಿತ ಭಾರತ ರೋಜಗಾರ್ ಯೋಜನೆಯಡಿ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಸುಮಾರು 2,400 ಕೋಟಿ ರೂ. ಪೋರೀತ್ಸಾಹಧನ ವಿತರಣೆ ಮಾಡಿದರು. ನವದೆಹಲಿಯ ವಿಜ್ಞಾನ ಭವನದಲ್ಲಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಡಿ.ಬಿ.ಟಿ ಮೂಲಕ

1 : ನೇಮಕಾತಿ ಪತ್ರ ವಿತರಣೆ
2 : ಕಾರ್ಮಿಕರು ಮತ್ತು ಉದ್ಯೋಗದಾತರಿಗೆ
3 : ಸುಮಾರು 3.50 ಕೋಟಿ ಉದ್ಯೋಗ

> ಇಂದು ಸುಮಾರು15 ಲಕ್ಷ ಉದ್ಯೋಗಿಗಳಿಗೆ ಡಿ.ಬಿ.ಟಿ ಮೂಲಕ ಪ್ರಧಾನಮಂತ್ರಿಗಳು ಪ್ರೋತ್ಸಾಹ ಧನ ವಿತರಣೆ ಮಾಡಲಿದ್ದಾರೆ. ಇದರಲ್ಲಿ ಕರ್ನಾಟಕದ 18,606 ಜನ ಉದ್ಯೋಗಿಗಳು ಮತ್ತು 57 ಉದ್ಯೋಗದಾತರಿಗೆ 10 ಕೋಟಿ ರೂ. ಸಹಾಯಧನ ದೊರೆಯಲಿದೆ ಎಂದರು.
> -ವಿಧಾನ ಪರಿಷತ್ ಶಾಸಕ ಶಶೀಲ ಜಿ. ನಮೋಶಿ

ಪೋರೀತ್ಸಾಹ ಧನಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಥಮ ಬಾರಿಗೆ ಕೆಲಸಕ್ಕೆ ಸೇರುವ ನಿರುದ್ಯೋಗಿಗಳಿಗೆ ಶಕ್ತಿ ನೀಡುವ ಈ ಯೋಜನೆ ಉದ್ಯೋಗಿ ಮತ್ತು ಉದ್ಯೋಗದಾತರು ಜೊತೆ ಜೊತೆಗೆ ವಿಕಾಸದ ಪರ್ವದಲ್ಲಿ ಹೆಜ್ಜೆ ಇಡುತ್ತಾ ವಿಕ್ಸಿತ್ ಭಾರತಕ್ಕೆ ಮುನ್ನುಡಿ ಬರೆಯಲಿದ್ದಾರೆ ಎಂದು ಬಣ್ಣಿಸಿದರು.

ಇ.ಪಿ.ಎಫ್.ಓ ನಡಿ ನೋಂದಾಯಿತ ಕಾರ್ಮಿಕರು ಮತ್ತು ಉದ್ಯೋಗದಾತರಿಗೆ ಇರುವ ಸೌಲಭ್ಯಗಳು ಮತ್ತು ಹೊಸ ಕಾರ್ಮಿಕ ಸುಧಾರಣೆಗಳ ಕುರಿತು ಕಾರ್ಮಿಕ ಸಮುದಾಯ ಮತ್ತು ಸಂಘಟನೆಗಳು, ಉದ್ಯೋಗದಾತರಿಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ನವದೆಹಲಿ ಕೇಂದ್ರಿತ ಈ ಕಾರ್ಯಕ್ರಮದ ನೇರ ಪ್ರಸಾರ ಕಲಬುರಗಿ ನಗರದ ಸೂಪರ್ ಮಾರ್ಕೆಟ್ ಪ್ರದೇಶದಲ್ಲಿನ ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ (ಕೆಕೆಸಿಸಿಐ) ಸಭಾಂಗಣದಲ್ಲಿ ಆಯೋಜಿಸಲಾಗಿತ್ತು.

ಸ್ಥಳೀಯವಾಗಿ ಕಾರ್ಯಕ್ರಮ ಉದ್ಘಾಟಿಸಿದ ವಿಧಾನ ಪರಿಷತ್ ಶಾಸಕ ಶಶೀಲ ಜಿ. ನಮೋಶಿ ಮಾತನಾಡಿ, ಪ್ರತಿಯೊಬ್ಬ ಉದ್ಯೋಗಿಗೆ ಆತನ ಮೊದಲ ಕೆಲಸ ಮತ್ತು ಮೊದಲ ವೇತನ


ಉದಯವಾಹಿನಿ ಚಿತ್ರ

ತುಂಬಾ ಸ್ಮರಣೀಯವಾಗಿರುತ್ತದೆ. ಈ ನಿಟ್ಟಿನಲ್ಲಿ ಎರಡು ವರ್ಷದ ಅವಧಿಯಲ್ಲಿ ಸುಮಾರು 3.50 ಕೋಟಿ ಉದ್ಯೋಗ ಸೃಜನೆಯ ಉದ್ದೇಶ ಹೊಂದಿರುವ ಕೇಂದ್ರ ಸರ್ಕಾರದ ಪ್ರಧಾನಮಂತ್ರಿ ವಿಕ್ಸಿತ್ ಭಾರತ ರೋಜಗಾರ್ ಯೋಜನೆ ಶ್ರಮಿಕ ವರ್ಗಕ್ಕೆ ದೊಡ್ಡ ಕೊಡುಗೆಯಾಗಿದೆ ಎಂದು ಅಭಿಪ್ರಾಯಪಟ್ಟರು.

> ಇ.ಪಿ.ಎಫ್.ಓ ನೋಂದಾಯಿಯ ಪ್ರತಿ ಕಾರ್ಮಿಕನಿಗೆ ಸಾಮಾಜಿಕ ಭದ್ರತೆ ಒದಗಿಸಲಿದೆ. ಶಿಕ್ಷಣ, ಕೌಶಲ್ಯ, ಉದ್ಯೋಗ, ಸಾಮಾಜಿಕ ಭದ್ರತೆ ಇದು ಪ್ರತಿ ಕಾರ್ಮಿಕನಿಗೆ ಸಿಗಬೇಕಾದ ಸ್ವಾಭಿಮಾನ ಮತ್ತು ಘನತೆಯ ಬದುಕಿನ ಗೌರವದ ಸಂಕೇತವಾಗಿದೆ ಎಂದರು.
> -ವಿಧಾನ ಪರಿಷತ್ ಶಾಸಕ ಶಶೀಲ ಜಿ. ನಮೋಶಿ

ಇದಕ್ಕು ಮುನ್ನ ಸಾಮಾನ್ಯ ಭವಿಷ್ಯ ನಿಧಿ ಕಲಬುರಗಿ ಪ್ರಾಂತೀಯ ಆಯುಕ್ತ ಎಂ.ಸುಬ್ರಮಣ್ಯಮ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಪ್ರಧಾನಮಂತ್ರಿ ವಿಕ್ಸಿತ್ ರೋಜಗಾರ್ ಯೋಜನೆ ಕಳೆದ ಆಗಸ್ಟ್-2025 ರಿಂದ ಆರಂಭವಾಗಿದ್ದು, ಜುಲೈ 2026ಕ್ಕೆ ಮುಕ್ತಾಯವಾಗಲಿದೆ. ಈ ಅವಧಿಯಲ್ಲಿ ಕೆಲಸಕ್ಕೆ ಸೇರುವ ಉದ್ಯೋಗಿಗಳಿಗೆ ಮತ್ತು ಕೆಲಾಕ್ಕೆ ತೆಗೆದುಕೊಳ್ಳುವ ಉದ್ಯೋಗದಾತರಿಗೆ ವಿಶೇಷ ಪೋರೀತ್ಸಾಹ ದೊರೆಯಲಿದೆ. ಇದೇ ಸಂದರ್ಭದಲ್ಲಿ ಹೊಸದಾಗಿ ಕೆಲಸಕ್ಕೆ ಆಯ್ಕೆಯಾದ ಯುವಕರಿಗೆ ಲಾಹೋಟಿ ಮೋಟರ್ಸ್, ಶ್ರೀ ಸಿದ್ದಸಿರಿ ಸಹಕಾರಿ ಬ್ಯಾಂಕ್, ಚಂದ್ರಶಿಲ್ಪ ಆಟೋಮೋಟಿವ್ ಪ್ರೈ.ಲಿ., ಬಜಾಜ್ ಅರ್ಥ ಮೂವರ್ಸ್ ಪ್ರೈ.ಲಿ. ಸಂಸ್ಥೆಯ ಅಧಿಕಾರಿಗಳು ನೇಮಕಾತಿ ಪತ್ರ ವಿತರಿಸಿ ಶುಭ ಕೋರಿದರು. ಇ.ಪಿ.ಎಫ್.ಓ ರಿಜಿನಲ್ ಕಮಿಟಿ ಸದಸ್ಯ ಶಂಕರ ಸುಲೆಗಾಂವ, ಕೆ.ಕೆ.ಸಿ.ಸಿ.ಐ ಅಧ್ಯಕ್ಷ ಶರಣಬಸಪ್ಪ ಪಪ್ಪಾ, ಧರ್ಮಿಜಿತ್ ಸಿಂಗ್, ಸಮಿರನ್ ದಾಸ್ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಸ್ಥಳೀಯ ಉದ್ಯಮಿಗಳು ಭಾಗವಹಿಸಿದ್ದರು.

# 22 ರಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಪೂರ್ವಭಾವಿ ಸಭೆ

• **ಉದಯವಾಹಿನಿ, ಕಲಬುರಗಿ,**

ಜಿಲ್ಲಾ ಕಾಂಗ್ರೆಸ್ ಸಮಿತಿ ಕಚೇರಿಯಲ್ಲಿ ಎಸ್ಐಆರ್ ವಿಭಾಗ ವಾರು ಜಾಗೃತ ಸಮಾವೇಶ ಕುರಿತು ಪೂರ್ವಭಾವಿ ಸಭೆಯನ್ನು ಜೂ.22 ರಂದು ಬೆಳಿಗ್ಗೆ 11 ಗಂಟೆಗೆ ಕರೆಲಾಗಿದೆ.


ಉದಯವಾಹಿನಿ ಚಿತ್ರ

ಕಲಬುರಗಿ ವಿಭಾಗ ಮಟ್ಟದ ಎಸ್ಐಆರ್ ಜಾಗೃತ ಸಮಾವೇಶಯು ಕಲಬುರಗಿ ನಗರದಲ್ಲಿ ಜೂ.29 ರಂದು ಹಮ್ಮಿಕೊಳ್ಳಲಾಗಿದ್ದು ಸದರಿ ವಿಷಯದ ಕುರಿತು ಈ ಪೂರ್ವಭಾವಿ ಸಭೆಯನ್ನು ಕರೆಲಾಗಿದೆ.

**ಎಸ್ಐಆರ್ ವಿಭಾಗವಾರು ಜಾಗೃತ ಸಮಾವೇಶ**

ಈ ಜಾಗೃತಿ ಸಮಾವೇಶದಲ್ಲಿ ರಾಷ್ಟ್ರ ಹಾಗೂ ರಾಜ್ಯ ಮಟ್ಟದ ಅನೇಕ ಕಾಂಗ್ರೆಸ್ ಮುಖಂಡರು ಭಾಗವಹಿಸಲಿದ್ದಾರೆ.

ಈ ಪೂರ್ವಭಾವಿ ಸಭೆಗೆ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಮುಖಂಡರು, ಹಾಲಿ ಹಾಗೂ ಮಾಜಿ ಸಚಿವರು, ಶಾಸಕರು, ಲೋಕಸಭೆ ಸದಸ್ಯರು, ವಿಧಾನ ಪರಿಷತ್ ಸದಸ್ಯರು, ನಿಗಮ/ಮಂಡಳಿ/ಪ್ರಾಧಿಕಾರದ ಅಧ್ಯಕ್ಷರು, ಕೆಪಿಸಿಸಿ ಪದಾಧಿಕಾರಿಗಳು ಹಾಗೂ ಸದಸ್ಯರು, ಡಿಸಿಸಿ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ ಹಾಗೂ ತಾಲ್ಲೂಕಿನ ಎಲ್ಲಾ ಮುಂಚೂಣಿ ಘಟಕ/ವಿಭಾಗ/ಸೆಲ್‌ಗಳ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಜಿಲ್ಲಾ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕಿನ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಕಾಂಗ್ರೆಸ್ ಪಕ್ಷದಿಂದ ಚುನಾಯಿತರಾದ ಹಾಲಿ ಹಾಗೂ ಮಾಜಿ ಎಲ್ಲಾ ಚುನಾಯಿತ ಸದಸ್ಯರುಗಳು, ಕಾರ್ಯಕರ್ತರು, ಅಭಿಮಾನಿಗಳು ಹೆಚ್ಚು ಹೆಚ್ಚು ಸಂಖ್ಯೆಯಲ್ಲಿ ಈ ಪೂರ್ವಭಾವಿ ಸಭೆಗೆ ಆಗಮಿಸಬೇಕಾಗಿ ಕೋರಲಾಗಿದೆ.

# ಚಿತ್ರದುರ್ಗದಲ್ಲಿ ಅದ್ದೂರಿ ಯೋಗ ಜಾತ ಕಾರ್ಯಕ್ರಮ: ಅಂತರರಾಷ್ಟ್ರೀಯ ಯೋಗ ದಿನಾಚರಣೆಗೆ ಚಾಲನೆ

• **ಉದಯವಾಹಿನಿ, ಚಿತ್ರದುರ್ಗ**

ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ ಚಿತ್ರದುರ್ಗ ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆಯುಷ್ ಇಲಾಖೆ ಚಿತ್ರದುರ್ಗ ಇವರ ಜಂಟಿ ಆಶ್ರಯದಲ್ಲಿ ಇಂದು ದಿನಾಂಕ 20/06/2026 ರಂದು ನಗರದಲ್ಲಿ ಹಮ್ಮಿಕೊಳ್ಳಲಾಗಿದ್ದ ಬೃಹತ್ 'ಯೋಗ ಜಾಥ' ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು.ಹಸಿರು ಬಾವುಟ ಪ್ರದರ್ಶಿಸುವುದರೊಂದಿಗೆ ಚಾಲನೆ. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಅಪರ ಜಿಲ್ಲಾಧಿಕಾರಿಗಳಾದ ಶ್ರೀ ಕುಮಾರಸ್ವಾಮಿ ಅವರು ಜಾತಕ್ಕೆ ಹಸಿರು ಬಾವುಟ ಪ್ರದರ್ಶಿಸುವ ಮೂಲಕ ಅಧಿಕೃತವಾಗಿ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ಯೋಗದ ಪಾತ್ರ ದೊಡ್ಡದಾಗಿದ್ದು,




ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಯೋಗವನ್ನು ರೂಢಿಸಿಕೊಳ್ಳಬೇಕು ಎಂದು ಕರೆ ನೀಡಿದರು.

**ಯೋಗದ ಮಹತ್ವದ ಕುರಿತು ಜಾಗೃತಿ**

ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ. ಚಂದ್ರಕಾಂತ್ ನಾಗಸಮುದ್ರ ಅವರು ಅಂತರರಾಷ್ಟ್ರೀಯ ಯೋಗ ದಿನದ ಮಹತ್ವ ಹಾಗೂ ದೈಹಿಕ-ಮಾನಸಿಕ ಆರೋಗ್ಯದ ಮೇಲೆ ಯೋಗ ಬೀರಬಹುದಾದ ಸಕಾರಾತ್ಮಕ ಪ್ರಭಾವಗಳ ಕುರಿತು ಮಾತನಾಡಿದರು.

**ಸಮಾಜ ನಿರ್ಮಾಣದಲ್ಲಿ ಯೋಗದ ಪಾತ್ರ ದೊಡ್ಡದು**

ಯೋಗವು ಕೇವಲ ವ್ಯಾಯಾಮವಲ್ಲ, ಅದು ಜೀವನ ನಡೆಸುವ ಅತ್ಯುತ್ತಮ ಪದ್ಧತಿಯಾಗಿದೆ ಎಂದು ಅವರು ಈ ಸಂದರ್ಭದಲ್ಲಿ ತಿಳಿಸಿದರು.

ಕಾರ್ಯಕ್ರಮದ ಆರಂಭದಲ್ಲಿ ಡಾ. ನಾರದಮುನಿ ಅವರು ಪ್ರಸ್ತಾವಿಕ ನುಡಿಗಳನ್ನು ಆಡಿ, ಕಾರ್ಯಕ್ರಮದ ಉದ್ದೇಶ ಮತ್ತು ಉಪಯೋಗಗಳನ್ನು ತಿಳಿಸಿದರು.

**500ಕ್ಕೂ ಹೆಚ್ಚು ಜನರ ಭಾಗಿ**

ಈ ಬೃಹತ್ ಯೋಗ ಜಾತ ಕಾರ್ಯಕ್ರಮದಲ್ಲಿ ಅಮೃತ ಆಯುರ್ವೇದ ವೈದ್ಯಕೀಯ ಕಾಲೇಜಿನ ಸಿಬ್ಬಂದಿ ವರ್ಗ ವಿದ್ಯಾರ್ಥಿಗಳು, ವಿವಿಧ ಯೋಗ ಸಂಸ್ಥೆಗಳ ಹಾಗೂ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಮತ್ತು ಸದಸ್ಯರು ಉತ್ಸಾಹದಿಂದ ಪಾಲ್ಗೊಂಡಿದ್ದರು.

ಆಯುಷ್ ಇಲಾಖೆಯ ಎಲ್ಲಾ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಗಳು ಸೇರಿದಂತೆ ಒಟ್ಟು 500ಕ್ಕೂ ಹೆಚ್ಚು ಜನ ಜಾತದಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ಜಿಲ್ಲಾಧಿಕಾರಿಗಳ ಕಚೇರಿಯಿಂದ ಪ್ರಾರಂಭಗೊಂಡ ಜಾಥಾವು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಜಾಥವು ಶ್ರೀ ಮುರುಘರಾಜೇಂದ್ರ ಕ್ರೀಡಾಂಗಣ, ಸರ್ಕಾರಿ ವಿಜ್ಞಾನ ಕಾಲೇಜು ಇಲ್ಲಿ ಮುಕ್ತಾಯಗೊಂಡಿತು.

# ಸುಳ್ಳು ಫೈರಿಂಗ್ ಪ್ರಕರಣ ಬಯಲು : ದೂರುದಾರ ಸೇರಿ ಮೂವರ ಬಂಧನ

• **ಉದಯವಾಹಿನಿ, ವಿಜಯಪುರ, :**

ವಿಜಯಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಫೈರಿಂಗ್ ಪ್ರಕರಣದ ತನಿಖೆಯಲ್ಲಿ ಮಹತ್ವದ ತಿರುವು ದೊರೆತಿದ್ದು, ದೂರುದಾರನೇ ಸುಳ್ಳು ಕಥೆ ಸೃಷ್ಟಿಸಿದ್ದಾನೆ ಎಂಬುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಜೂ. 3ರಂದು ವಿಜಯಪುರ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ಸಂಖ್ಯೆ 255/2026 ದಾಖಲಿಸಲಾಗಿತ್ತು. ಇಟ್ಟಂಗಿಹಾಳ ದೊಡ್ಡಿಯ ನಿವಾಸಿ ದಯವಂತ ಡೇರೆ ಅವರು, ತೊರವಿ ಗ್ರಾಮದ ಹದ್ದಿಯಲ್ಲಿರುವ ತಮ್ಮ ಜಮೀನಿನಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಇಬ್ಬರು ಅಪರಿಚಿತರು ಮುಖ ಮುಚ್ಚಿಕೊಂಡು ಬಂದು ಗುಂಡು ಹಾರಿಸಿ ಗಾಯಗೊಳಿಸಿದ್ದಾರೆ ಎಂದು ದೂರು ನೀಡಿದ್ದರು. ಅಲ್ಲದೆ, ಈ ಪ್ರಕರಣಕ್ಕೆ ಸಂಬಂಧಿಸಿ ಆರು ಜನರ ಹೆಸರನ್ನೂ ಆರೋಪಿಗಳಾಗಿ ಉಲ್ಲೇಖಿಸಿದ್ದರು.

ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಜಿಲ್ಲಾ ಪೊಲೀಸರು ವಿಶೇಷ ತನಿಖಾ ತಂಡ ರಚಿಸಿ ಪರಿಶೀಲನೆ ನಡೆಸಿದರು. ತನಿಖೆಯಲ್ಲಿ ಆರೋಪಿಗಳೆಂದು ಶಂಕಿಸಲಾದ ಆನಂದ ಅಲಿಯಾಸ್ ಅನೀಲ ಡೇರಿ ಹಾಗೂ ಕೊಂಡಿಬಾ ಮಾನವರ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಯಿತು.

ವಿಚಾರಣೆ ವೇಳೆ ಬೆಚ್ಚಿಬೀಳಿಸುವ ಸತ್ಯ ಹೊರಬಂದಿದ್ದು, ದಯವಂತ ಡೇರೆ ಹಾಗೂ ಇತರ ಇಬ್ಬರು ಸೇರಿ ಹಳೆಯ ವೈಮನಸ್ಸಿನ ಕಾರಣದಿಂದ ಕೆಲವರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸುವ ಉದ್ದೇಶ ಹೊಂದಿದ್ದರು ಎಂದು ತಿಳಿದು ಬಂದಿದೆ.

# 22ಕ್ಕೆ ಕನಕದಾಸರ ನೃತ್ಯ ರೂಪಕ ಪ್ರದರ್ಶನ

• **ಉದಯವಾಹಿನಿ,ಬೀದರ್:**

ನಗರದ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗ ಮಂದಿರದಲ್ಲಿ ಜೂ. 22 ರಂದು ಸಂಜೆ 6.30ಕ್ಕೆ ಹಮ್ಮಿಕೊಳ್ಳಲಾದ ಕನಕದಾಸರ ಕುರಿತ 'ಮುತ್ತು ಬಂದಿದೆ ಕೇರಿಗೆ' ಸಂಗೀತ ಹಾಗೂ ನೃತ್ಯ ರೂಪಕ ಪ್ರದರ್ಶನ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ರಾಜ್ಯ ಕುರಿ ಮಹಾ ಮಂಡಳದ ನಿರ್ದೇಶಕ ಪಂಡಿತರಾವ್ ಚಿದ್ರಿ ಮನವಿ ಮಾಡಿದ್ದಾರೆ.



ಕನಕದಾಸರು 15-16ನೇ ಶತಮಾನದ ಶ್ರೇಷ್ಠ ಸಂತರು. ಸಮ ಸಮಾಜ ಕಟ್ಟಲು ಶ್ರಮಿಸಿದ್ದರು. ರೂಪಕವು ಅವರು ಬೋಧಿಸಿದ ಸಹೋದರತ್ವ, ಸಹಬಾಳ್ವೆ, ಸಹಿಷ್ಣುತೆ, ದಯೆ, ಕರುಣೆ ಮೊದಲಾದ ಮಾನವೀಯ ಮೌಲ್ಯಗಳ ಮೇಲೆ ಬೆಳಕು ಚೆಲ್ಲಲಿದೆ. ಕೀರ್ತನೆಗಳ ಮೂಲಕ ಜಾತಿ, ವರ್ಗ, ವರ್ಣ ತಾರತಮ್ಯ, ಮೌಢ್ಯದ ವಿರುದ್ಧ ಅವರು ಅವರು ಮೂಡಿಸಿದ ಜಾಗೃತಿಯನ್ನು ಬಿಚ್ಚಿಡಲಿದೆ ಎಂದು ತಿಳಿಸಿದ್ದಾರೆ.

ಬೆಂಗಳೂರಿನ ಸಂತಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರ ವಿಶೇಷ ನೃತ್ಯ ರೂಪಕ ಸಿದ್ಧಪಡಿಸಿದೆ. ಖ್ಯಾತ ಕಲಾವಿದರು ಮನೋಜ್ಞವಾಗಿ ರೂಪಕ ಪ್ರದರ್ಶಿಸಲಿದ್ದು, ರಾಜ್ಯ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಚ್. ಎಂ. ರೇವಣ್ಣ ಇದಕ್ಕೆ ಸಹಕಾರ ನೀಡಲಿದ್ದಾರೆ ಎಂದು ಹೇಳಿದ್ದಾರೆ.

ಸುಂದರ ಸಮಾಜ ನಿರ್ಮಾಣಕ್ಕೆ ಕನಕದಾಸರ ತತ್ವಗಳು ಬಹು ಅವಶ್ಯಕವಾಗಿದ್ದು, ಜಿಲ್ಲೆಯ ಜನ ಕನಕದಾಸರ ಕುರಿತ ಸಂಗೀತ ಹಾಗೂ ನೃತ್ಯ ರೂಪಕ ಪ್ರದರ್ಶನದ ಸದುಪಯೋಗ ಪಡೆಯಬೇಕು ಎಂದು ತಿಳಿಸಿದ್ದಾರೆ.

# ಪಿಕಪ್ ವಾಹನ ಡಿಕ್ಕಿ: ಮಹಿಳೆ ದುರ್ಮರಣ

• **ಉದಯವಾಹಿನಿ ಜಮಖಂಡಿ, :**

ತಾಲ್ಲೂಕಿನ ಗೋಟೆ-ಗದ್ಯಾಳ ಗ್ರಾಮದ ಮಧ್ಯಭಾಗದಲ್ಲಿ ನಡೆದ ರಸ್ತೆ ಅಪಘಾತದಲ್ಲಿ ಮಹಿಳೆಯೊಬ್ಬರು ಮೃತಪಟ್ಟಿರುವ ದುರ್ಘಟನೆ ನಡೆದಿದೆ.

ಮೃತ ಮಹಿಳೆಯನ್ನು ಕಾಜಿಬಿಳಗಿ ಗ್ರಾಮದ ಭೀಮವ್ವ ಹಣಮಂತ ಹಳೆಜೋಳ (50) ಎಂದು ಗುರುತಿಸಲಾಗಿದೆ.

ಲಭ್ಯ ಮಾಹಿತಿಯಂತೆ, ಪಿಕಪ್ ವಾಹನ ಡಿಕ್ಕಿ ಹೊಡೆದ ಪರಿಣಾಮ ಭೀಮವ್ವ ಅವರು ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ. ಘಟನಾ ಸ್ಥಳಕ್ಕೆ ಸಾವಳಗಿ ಪೊಲೀಸ್ ಠಾಣೆಯ ಪಿ.ಎಸ್.ಐ ಅಪ್ಪಣ್ಣ ಐಗಾಳಿ ನೇತೃತ್ವದ ಪೊಲೀಸ್ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಯೋಗ ನಮ್ಮ ದೇಶದ ಸಂಸ್ಕೃತಿ ಮತ್ತು ಪೂರ್ವಜರ ಕೊಡುಗೆ: ಪಡಶೆಟ್ಟಿ

• **ಉದಯವಾಹಿನಿ, ಸಿಂದಗಿ:**

ಯೋಗ ನಮ್ಮ ದೇಶದ ಸಂಸ್ಕೃತಿ ಮತ್ತು ಪೂರ್ವಜರ ಕೊಡುಗೆ. 5ಸಾವಿರ ವರ್ಷಗಳ ಹಿಂದೇಯೆ ನಮ್ಮ ಪೂರ್ವಜರು ಬಿಟ್ಟುಹೋಗಿದ್ದಾರೆ. ಇಡೀ ವಿಶ್ವಕ್ಕೆ ಭಾರತ ಕೊಟ್ಟಿರುವ ಕೊಡುಗೆ ಇದು ಎಂದು ಜಾನಪದ ವಿದ್ವಾಂಸ ಹಾಗೂ ಭೀಮಾ ಯೂನಿವರ್ಸಲ್ ಸೆಂಟ್ರಲ್ ಶಾಲೆಯ ನಿರ್ದೇಶಕರಾದ ಡಾ.ಎಂ.ಎಂ.ಪಡಶೆಟ್ಟಿ ಹೇಳಿದರು.

ಪಟ್ಟಣದ ಹೊರವಲಯದ ಭೀಮಾ ಯೂನಿವರ್ಸಲ್ ಸೆಂಟ್ರಲ್ ಶಾಲೆಯ ಆವರಣದಲ್ಲಿ ವಿಶ್ವ ಯೋಗ ದಿನದ ಪೂರ್ವಭಾವಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಯೋಗದಿಂದ ದೈಹಿಕ, ಮಾನಸಿಕ ಸದೃಢ ಗೊಳ್ಳುವುದರ ಮೂಲಕ ಮಕ್ಕಳಲ್ಲಿ ಓದುವ ಹವ್ಯಾಸವನ್ನು ಬೆಳೆಯಲು ಅನುಕೂಲವಾಗುತ್ತದೆ. ಪ್ರಾಚೀನ ಋಷಿ-ಮುನಿಗಳು ಯೋಗವನ್ನು ದೇಹ ಮನಸ್ಸು ಮತ್ತು ಆತ್ಮದ ಸಮತೋಲನ ಅಭ್ಯಾಸ ಮಾಡುತ್ತಿದ್ದರು. ಯೋಗ ವ್ಯಾಯಾಮವಲ್ಲ ಇದು ಆರೋಗ್ಯಕರ ಜೀವನ ಶೈಲಿಯಾಗಿದೆ, ಯೋಗಭ್ಯಾಸ ಚುರುಕು ಉತ್ಸಹ, ದೈಹಿಕ ಮಾನಸಿಕ ಶುದ್ದಿಕರಣ ಯೋಗದಿಂದ ಸಿಗಲಿದೆ ಎಂದರು. ಮುಖ್ಯ ಅತಿಥಿಗಳಾಗಿ ಸಾವಯವ ಕೃಷಿ ತಜ್ಞರಾದ ಸುನೀಲ ನಾರಾಯಣಕರ ಅವರು ಮಾತನಾಡಿ, ರಾಸಾಯನಿಕ ಗೊಬ್ಬರದಿಂದ ಬೆಳೆ ಬೆಳೆದು ದೇಹದಲ್ಲಿ ವಿಷಕಾರಿ ಅಂಶಗಳು ಸೇರಿ ಅನಾರೋಗ್ಯಕ್ಕೆ




ತುತ್ತಾಗುತ್ತಿದ್ದೇವೆ. ನಾವೆಲ್ಲರು ಸಾವಯವ ಕೃಷಿಗೆ ಹೆಚ್ಚಿನ ಆದ್ಯತೆ ನೀಡಿ, ಯೋಗಾಸನದ ಮೂಲಕ ಆರೋಗ್ಯವನ್ನು ಕಾಪಾಡಿಕೊಳ್ಳ ಬೇಕು ಎಂದು ಹೇಳಿದರು. ವಿದ್ಯಾರ್ಥಿಗಳಾದ ಶ್ರಾವಣಿ, ಖುಷಿ, ಪೂಜಾ, ಶಾಂಭವಿ ಯೋಗದ ಮಹತ್ವ ಮತ್ತು ದೈಹಕ್ಕೆ ಆಗುವ ಉಪಯೋಗ ಕುರಿತು ಮಾತನಾಡಿದರು.

ದೈಹಿಕ ಶಿಕ್ಷಕರಾದ ರಾಜು ಉಪ್ಪಾರ ನೇತೃತ್ವದಲ್ಲಿ ಮಕ್ಕಳಿಂದ ತ್ರಿಕೋಣಾಸನ, ಸಮ ದಂಡಾಸನ, ಉಷ್ಣಾಸನ, ಶಶಂಕಾಸನ, ಭುಜಂಗಾಸನ, ನಾಡಿಶೋಧನ ಪ್ರಾಣಾಯಾಮ ಧ್ಯಾನ ಮಾಡಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ನಿರ್ದೇಶಕರುಗಳಾದ ಜಿ.ಕೆ.ಪಡಗಾನೂರ, ಶರಣು ಮಾವುರ ಸೇರಿದಂತೆ ಬೋಧಕ ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಉಪ ಲೋಕಾಯುಕ್ತರ ದಿಢೀರ್ ಭೇಟಿ, ತರಾಟೆ

• **ಉದಯವಾಹಿನಿ, ಬೀದರ್**

ಬೆಳ್ಳಂ ಬೆಳ್ಳಗೆ ಕೇಂದ್ರ ಬಸ್ ನಿಲ್ದಾಣ ಸೇರಿದಂತೆ ವಿವಿಧ ಕಡೆಗಳಲ್ಲಿ ಉಪ ಲೋಕಾಯುಕ್ತರು ದಿಢೀರ್ ಭೇಟಿ ನೀಡಿ ಅಧಿಕಾರಿಗಳಿಗೆ ತರಾಟೆಗೆ ತೆಗೆದುಕೊಂಡ ಘಟನೆ ಬೀದರ್ ನಲ್ಲಿ ನಡೆದಿದೆ. ಮೊದಲು ಕೇಂದ್ರ ಬಸ್ ನಿಲ್ದಾಣಕ್ಕೆ ಭೇಟಿ ನೀಡಿ ಶೌಚಾಲಯದ ಪರಿಸ್ಥಿತಿ ನೋಡಿ ಉಪ ಲೋಕಾಯುಕ್ತರು ಸಾರಿಗೆ ಅಧಿಕಾರಿ ಬಿ ವೀರಪ್ಪಗೆ ಪುಲ್ ಕ್ಲಾಸ್ ತೆಗೆದುಕೊಂಡರು.

ಇಲ್ಲಿ ಪ್ರಾಣಿಗಳು ಕೂಡಾ ಶೌಚ ಮಾಡಲ್ಲಾ, ಇದೇನರೀ ಶೌಚಾಲಯ, ಒಂದು ಪೈಪ್ ಸಂಪರ್ಕ ಇಲ್ಲಾ, ಗಲಿಜು ವಾಸನೆ ಬರುತ್ತಿದೆ ಎಂದು ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾರಿ ರಾಜೇಂದ್ರ ಜಾದವ್ ಗೆ ಉಪ ಲೋಕಾಯುಕ್ತರು ಪುಲ್ ಕ್ಲಾಸ್ ತೆಗೆದುಕೊಂಡರು.

ಉಪ ಲೋಕಾಯುಕ್ತರು ಬರುತ್ತಿದ್ದಂತೆ ಸಾರಿಗೆ ಇಲಾಖೆಯ ಸಿಬ್ಬಂದಿಗಳು ಪೈಪ್ ಮೂಲಕ ನೀರಿನಿಂದ ಇಡೀ ಬಸ್ ನಿಲ್ದಾಣ ಸ್ವಚ್ಛ ಮಾಡುತ್ತಿದ್ದು ಈಗ ನಾನು ಬರುತ್ತೆನೆ ಎಂದು ಸ್ವಚ್ಛ ಮಾಡತ್ತಿದ್ದಿರಾ ಎಂದು ಉಪ ಲೋಕಾಯುಕ್ತರು ಗರಂ ಆದ್ರು ಇನ್ನು ಹಳೆಯ ಬಸ್ ನಿಲ್ದಾಣ, ಎಪಿಎಂಸಿ ತರಕಾರಿ ಮಾರ್ಕೆಟ್ ಮತ್ತು ಬೀದರ್ ತಾಲ್ಲೂಕಿನ ತ್ಯಾಜ್ಯ ವಿಲೇವಾರಿ ಘಟಕ್ಕೆ ಭೇಟಿ ನೀಡಿದ್ದು. ಅಲ್ಲಿ ಗ್ರಾಮಸ್ಥರ ಜೊತೆ ಮಾಹಿತಿ ಪಡೆದು ಈ ತ್ಯಾಜ್ಯ ವಿಲೇವಾರಿ ಘಟಕವನ್ನು ಕ್ಲೀನ್ ಮಾಡಿ ಬೇರೆ ಕಡೆ ಸ್ಥಳಾಂತರ ಮಾಡಿ ಎಂದು ಮಹಾ ನಗರ ಪಾಲಿಕೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.

ಡಿಸಿ ಶಿಲ್ಪಾ ಶರ್ಮಾ, ಎಸ್ಪಿ ಪ್ರದೀಪ್ ಗುಂಟಿ ಸೇರಿದಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಉಪ ಲೋಕಾಯುಕ್ತರಿಗೆ ಸಾಥ್ ನೀಡಿದ್ದರು.

# ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ವಿರೋಧ ರಾಯಚೂರು

## ಜಿಲ್ಲೆಯಲ್ಲಿ ಏಮ್ಸ್ ಆಸ್ಪತ್ರೆ ಸ್ಥಾಪನೆ ಮಾಡಬೇಕೆಂದು ಅಧಿಕೃತ ಪ್ರಸ್ತಾವನೆ ಸಲ್ಲಿಸಲಾಗಿದೆ. ಕೇಂದ್ರ ಸಚಿವರಾದ ಜೋಶಿರವರು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಮಲತಾಯಿ ಧೋರಣೆ ಅನುಸರಿಸುತ್ತಿದ್ದಾರೆ

• **ಉದಯವಾಹಿನಿ ಕಲಬುರಗಿ,**

ಕೇಂದ್ರದಲ್ಲಿ ಮೋದಿ ಸರ್ಕಾರ ಅಧಿಕಾರಕ್ಕೆ ಬಂದ ನಂತರ ಮುಂಬಯಿ ಕರ್ನಾಟಕದ ಬಲಿಷ್ಠ ಪ್ರಭಾವಿ ನಾಯಕರು ಸೇರಿದಂತೆ ಪ್ರಸ್ತುತ ಕೇಂದ್ರ ಸಚಿವರಾದ ಪ್ರಲ್ಹಾದಜೋಶಿ ರವರು 371ನೇ ಜೇ ಕಲಂ ತಿದ್ದುಪಡಿ ಸ್ಥಾನಮಾನ ಪಡೆದಿರುವ ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿ ಬಗ್ಗೆ ವಿರೋಧಿಯಾಗಿ ವರ್ತಿಸುತ್ತಾ ಕರ್ನಾಟಕ ರಾಜ್ಯದಲ್ಲಿ ಉತ್ತರ ಕರ್ನಾಟಕವೆಂದರೆ ಕೇವಲ ಕಿತ್ತೂರು ಕರ್ನಾಟಕವೆಂದು ಪ್ರಧಾನಮಂತ್ರಿ ಸೇರಿದಂತೆ ಕೇಂದ್ರದ ಎಲ್ಲಾ ಸಚಿವರಲ್ಲಿ ಅಭಿಪ್ರಾಯ ಮೂಡಿಸುತ್ತಾ ಕೇಂದ್ರದ ಬಹುತೇಕ ಯೋಜನೆಗಳು, ಹೊಸ ರೈಲ್ವೆ ಸೇರಿದಂತೆ ಕೇಂದ್ರದ ಎಲ್ಲಾ ಅಭಿವೃದ್ಧಿ ಯೋಜನೆಗಳು ಧಾರವಾಡ ಸೇರಿದಂತೆ ಮುಂಬಯಿ ಕರ್ನಾಟಕಕ್ಕೆ ತೆಗೆದುಕೊಂಡು ಹೋಗುತ್ತಿದ್ದಾರೆ.

ನಿರಂತರವಾಗಿ ಕೇಂದ್ರ ಸಚಿವರಾದ ಜೋಶಿರವರು ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಮಲತಾಯಿ ಧೋರಣೆ ಅನುಸರಿಸುತ್ತಿದ್ದಾರೆ ಅದರಂತೆ ಕೇಂದ್ರ ಸರ್ಕಾರವು ಸಹ ಇವರ ಮಾರ್ಗದರ್ಶಿದಂತೆ ವರ್ತಿಸುತ್ತಿದೆ ಎಂದು ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಗೌರವಾಧ್ಯಕ್ಷರಾದ ಬಸವರಾಜ ದೇಶಮುಖ ಮತ್ತು ಸಂಸ್ಥಾಪಕ ಅಧ್ಯಕ್ಷರಾದ ಡಾ.ಲಕ್ಷ್ಮಣ ದಸ್ತಿ ಅವರು ಕೇಂದ್ರ ಸರ್ಕಾರದ ಮಲತಾಯಿ ಧೋರಣೆಗೆ ಬಲವಾಗಿ ಖಂಡಿಸಿದ್ದಾರೆ.


ಉದಯವಾಹಿನಿ ಚಿತ್ರ

ಕೇಂದ್ರ ಸರ್ಕಾರ ಕರ್ನಾಟಕ ರಾಜ್ಯಕ್ಕೆ ಏಮ್ಸ್ ಮಂಜೂರು ಮಾಡಲು ತೀರ್ಮಾನಿಸಿದೆ. ಅದರಂತೆ ಕೇಂದ್ರ ಸರ್ಕಾರ ಕರ್ನಾಟಕ ರಾಜ್ಯದ ಯಾವ ಜಿಲ್ಲೆಗಳಲ್ಲಿ ಏಮ್ಸ್ ಸ್ಥಾಪನೆ ಮಾಡಬೇಕೆಂದು ರಾಜ್ಯ ಸರ್ಕಾರಕ್ಕೆ ಅಭಿಪ್ರಾಯ ಕೇಳಿತ್ತು ಇದಕ್ಕೆ ಪೂರಕವಾಗಿ ರಾಜ್ಯ ಸರ್ಕಾರ ಕಲ್ಯಾಣ ಕರ್ನಾಟಕ ಪ್ರದೇಶದ ಅತ್ಯಂತ ಹಿಂದುಳಿದ ಮತ್ತು ಮಹಾತ್ವಾಕಾಂಕ್ಷಿ ಜಿಲ್ಲೆಯಾದ ರಾಯಚೂರು ಜಿಲ್ಲೆಯಲ್ಲಿ ಏಮ್ಸ್ ಆಸ್ಪತ್ರೆ ಸ್ಥಾಪನೆ ಮಾಡಬೇಕೆಂದು ಅಧಿಕೃತ ಪ್ರಸ್ತಾವನೆ ಸಲ್ಲಿಸಲಾಗಿದೆ. ಅದರಂತೆ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣ ಪ್ರಕಾಶ ಪಾಟೀಲರವರ ನೇತೃತ್ವದಲ್ಲಿ ನಿಯೋಗದ ಮೂಲಕ ದೆಹಲಿಗೆ ಭೇಟಿ ನೀಡಿ ಕೇಂದ್ರದ ಆಗಿನ ಆರೋಗ್ಯ ಸಚಿವರಾದ ಮನಸುಖ ಮಾಂಡವೀಯರವರಿಗೆ ಭೇಟಿ ಮಾಡಿ

> ಕರ್ನಾಟಕದ ಆಗಿನ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಹ ಪ್ರಧಾನ ಮಂತ್ರಿಗಳಿಗೆ ಸಮಕ್ಷಮ ಭೇಟಿ ಮಾಡಿ ರಾಯಚೂರಿನಲ್ಲಿ ಏಮ್ಸ್ ಆಸ್ಪತ್ರೆ ಸ್ಥಾಪನೆ ಮಾಡವ ಬಗ್ಗೆ ಅಧಿಕೃತ ಪ್ರಸ್ಥಾವನೆ ಸಲ್ಲಿಸಿದ್ದಾರೆ.

> ಕರ್ನಾಟಕ ರಾಜ್ಯದಲ್ಲಿ ಏಮ್ಸ್ ಸ್ಥಾಪನೆ ಆಗಬೇಕಾದರೆ ಧಾರವಾಡದಲ್ಲಿ ಸ್ಥಾಪನೆ ಮಾಡಲು ಕೇಂದ್ರದ ಉನ್ನತ ಮಟ್ಟದ ಸಮಿತಿಯಿಂದ ಕೇಂದ್ರ ಸಚಿವರಾದ ಜೋಶಿ ರವರು ಮೂರು ವರ್ಷಗಳ ಹಿಂದೆ ಪೂರ್ವ ಭಾವಿ ಪರಿಶೀಲನೆ ಕಾರ್ಯ ಸಹ ಮಾಡಿಸಿದ್ದಾರೆ.

ಪ್ರಸ್ಥಾವನೆ ಸಲ್ಲಿಸಲಾಗಿತ್ತು, ಈ ಸಂದರ್ಭದಲ್ಲಿ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಸಂಸದರು, ಶಾಸಕರು, ಕಲ್ಯಾಣ ಕರ್ನಾಟಕ ಹೋರಾಟ ಸಮಿತಿಯ ಸಂಸ್ಥಾಪಕ ಅಧ್ಯಕ್ಷರಾದ ಡಾ.ಲಕ್ಷ್ಮಣ ದಸ್ತಿ ಸೇರಿದಂತೆ ಏಮ್ಸ್ ಹೋರಾಟ ಸಮಿತಿಯ ಸಂಚಾಲಕರಾದ ಡಾ.ಬಸವರಾಜ ಕಳಸ ಸೇರಿದಂತೆ ಆಯ್ದು ಪ್ರಮುಖ ಹೋರಾಟಗಾರರು ದೆಹಲಿ ಭೇಟಿ ಸಂದರ್ಭದಲ್ಲಿ ಭಾಗವಹಿಸಿದರು ಆಗಿನ ಕೇಂದ್ರದ ಆರೋಗ್ಯ ಸಚಿವರಾದ ಮನಸುಖ ಮಾಂಡವೀಯ ರವರು ರಾಜ್ಯ ಸರ್ಕಾರ ಸೂಚಿಸಿದ ಸ್ಥಳದಲ್ಲಿಯೆ ಏಮ್ಸ್ ಸ್ಥಾಪನೆ ಮಾಡುವ ಬಗ್ಗೆ ಭರವಸೆ ನೀಡಿದರು. ಕೇಂದ್ರ ಸರ್ಕಾರ ವಿಶೇಷವಾಗಿ ಪ್ರಧಾನ ಮಂತ್ರಿಗಳು ಭಾರತ ಸರ್ಕಾರದಿಂದ ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ 371ನೇ ಜೇ ಸ್ಥಾನಮಾನ ಪಡೆದಿರುವ ಕಲ್ಯಾಣ ಕರ್ನಾಟಕದ ಮಹಾತ್ವಾಕಾಂಕ್ಷಿ ಜಿಲ್ಲೆಯಾದ ರಾಯಚೂರಿಗೆ ಏಮ್ಸ್ ನೀಡುವುದರಿಂದ ಕರ್ನಾಟಕ, ತೆಲಂಗಾಣ, ಆಂಧ್ರ ಪ್ರದೇಶದ ಹದಿನಾಲ್ಕು ಜಿಲ್ಲೆಗಳಿಗೆ ಆರೋಗ್ಯ ದೃಷ್ಟಿಯಿಂದ ಅನುಕೂಲವಾಗುವುದು ಈ ಬಗ್ಗೆ ಗಂಭೀರವಾಗಿ ಪರಿಗಣಿಸಿ ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ನ್ಯಾಯ ಒದಗಿಸಲು ಪ್ರಧಾನ ಮಂತ್ರಿಗಳಿಗೆ ಕಲ್ಯಾಣ ಕರ್ನಾಟಕ ಹೋರಾಟ ಸಮಿತಿ ಒತ್ತಾಯಿಸಿದೆ.

### ರಾಯಚೂರಿಗೆ ಐಐಟಿ ನೀಡಲು ಶಿಫಾರಸು

ಒಟ್ಟಾರೆ ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿರವರು ಈ ಹಿಂದೆ ನಂಜುಂಡಪ್ಪ ವರದಿ ರಾಯಚೂರಿಗೆ ಐಐಟಿ ನೀಡಲು ಶಿಫಾರಸು ಮಾಡಿದರು ಸಹ ಇದಕ್ಕೆ ಕ್ಯಾರೆ ಎನ್ನದೆ ತಮ್ಮದೆ ಆದ ರಾಜಕೀಯ ಪ್ರಭಾವ ಬಳಿಸಿಕೊಂಡು ಐಐಟಿ ಧಾರವಾಡಕ್ಕೆ ಸ್ಥಳಾಂತರ ಮಾಡಿಸಿಕೊಂಡರು, ಅದೆ ರೀತಿ ಏಮ್ಸ್ ಆಸ್ಪತ್ರೆ ಕಲ್ಯಾಣ ಕರ್ನಾಟಕದ ರಾಯಚೂರಿಗೆ ಸಿಗದಂತೆ ಕುಠಿಲ ತಂತ್ರ ಅನುಸರಿಸುತ್ತಿದ್ದಾರೆ.